ಸಂಪುಟ : 10 ಸಂಚಿಕೆ: 288 ಪುಟ : 4+2 ಬೆಲೆ: 3.00 ಬುಧವಾರ ಡಿಸೆಂಬರ್ 31 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 288 Pages : 4+2 Price : 3.00 Wednesday December 31 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕೆರೆ ಒತ್ತುವರಿ ತೆರವುಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಇಟ್ಟಿಗೇರಿ ಕೆರೆ ಒತ್ತುವರಿಯಾಗಿದ್ದು, ಅದನ್ನು ತೆರವುಗೊಳಿಸಬೇಕು ಎಂದು ಮುಖಂಡರಾದ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದುರುದ್ದೇಶದಿಂದ ಕೆರೆ ಒತ್ತುವರಿ ಆಗಿದ್ದರೂ ಕೆರೆ ಒತ್ತುವರಿ ತೆರವುಗೊಳಿಸದೇ ಕೆರೆ ಅಭಿವೃದ್ಧಿ ಕಾಮಗಾರಿ ಮಾಡಲಾಗುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳಿಗೆ ಒತ್ತುವರಿ ತೆರವುಗೊಳಿಸಿ ಎಂದು ಹೇಳಿದರೆ ಅದು ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಬರುತ್ತದೆ, ಲೋಕಾಯುಕ್ತದಲ್ಲಿ ದೂರು ಇದೆ ಎಂದು ಜಾರಿಕೊಳ್ಳುತ್ತಿದ್ದಾರೆ. ಕೆರೆ ಅಭಿವೃದ್ಧಿ ಪ್ರಾಧಿಕಾರದ ಪರವಾನಗಿ ಇಲ್ಲದೆ ಹಿಂದಿನ ಪುರಸಭೆ ಅಧಿಕಾರಿ ಕೆರೆಯಂಚಿನಲ್ಲಿ ರಸ್ತೆ ನಿರ್ಮಿಸಲು ಅನುಮತಿ ಕೊಟ್ಟಿದ್ದಾರೆ. ಎಲ್ಲಾ ಸಮಸ್ಯೆಗಳ ಬಗ್ಗೆ ಲೋಕಾಯುಕ್ತ ಅಧಿಕಾರಿಗಳ ಗಮನಕ್ಕೆ ತರುತ್ತೇವೆ. ಒತ್ತುವರಿ ತೆರವುಗೊಳಿಸದಿದ್ದರೆ ಕೆರೆ ರಕ್ಷಿಸಲು ಹೋರಾಟ ಹಮ್ಮಿಕೊಳ್ಳಲಾಗುವುದು ಎಂದರು.

ಹಿರಿಯ ಮುಖಂಡ ಪೂರ್ಣಾಜಿ ಖರಾಟೆ ಮಾತನಾಡಿ, ಪಟ್ಟಣದ ಜನ-ಜಾನುವಾರುಗಳ ಜೀವನಾಡಿಯಾದ ಈ ಕೆರೆ ಅಂದಾಜು 13ರಿಂದ 17ಎಕರೆ ವಿಸ್ತೀರ್ಣವಿದೆ. 3 ವರ್ಷದ ಹಿಂದೆ ಕೆರೆ ಸಂಪೂರ್ಣ ತುಂಬಿ ಕೆರೆಯಂಚಿನಲ್ಲಿನ ನಿವಾಸಿಗಳಿಗೆ ತೊಂದರೆಯಾಗುತ್ತಿದೆ ಎಂದು 40 ದಿನಗಳು ಹಗಲು-ರಾತ್ರಿ ನೀರನ್ನು ಹೊರಗಡೆ ಹಾಕಿದರು. ಅವೈಜ್ಞಾನಿಕ ಮತ್ತು ಯಾವುದೇ ಪೂರ್ವಾಪರ ಯೋಜನೆ ಇಲ್ಲದೇ ಕೆರೆ ನೀರು ಹೊರ ಹಾಕಿದ್ದರಿಂದ ನೀರು ಹರಿದು ಹೋಗುವ ಮಾರ್ಗದ ಅನೇಕ ಮನೆಗಳಿಗೆ ತೊಂದರೆಯಾಯಿತು. ನೂರಾರು ಎಕರೆ ಜಮೀನು ಜಲಾವೃತವಾದವು. ಅಂದು ಜಿಲ್ಲಾಧಿಕಾರಿಗಳು ಭೇಟಿ ನೀಡಿದ ಸಂದರ್ಭದಲ್ಲಿ ನೀರು ಹರಿದು ಹೋಗಲು ರಾಜಕಾಲುವೆ ನಿರ್ಮಾಣಕ್ಕೆ ಸೂಚನೆ ನೀಡಿದ್ದರು. ಈಗ ಪುರಸಭೆಯವರು ಕೆರೆ ಅಭಿವೃದ್ಧಿ ನಿಧಿ 57 ಲಕ್ಷ ರೂ ವೆಚ್ಚದಲ್ಲಿ ಕೆರೆ ವಿಸ್ತೀರ್ಣ ಕಡಿಮೆ ಮಾಡಿ ಅಭಿವೃದ್ಧಿ ಕಾರ್ಯ ಕೈಗೊಂಡಿದ್ದಾರೆ. ಯಾರೂ ಕೇಳುವವರೇ ಇಲ್ಲದಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

### ಜಿಲ್ಲಾ ಕಣ್ಗಾವಲು ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

## ದಾಖಲಾಗದೇ ಉಳಿದಿರುವ ಪ್ರಕರಣ ಪತ್ತೆ ಮಾಡಿ



ರಾಷ್ಟ್ರೀಯ ರೇಬಿಸ್ ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲಾ ಮಟ್ಟದ ವಿಶ್ವ ರೇಬಿಸ್ ದಿನಾಚರಣೆಯನ್ನು ಮುಂಡರಗಿಯ ಶ್ರೀ ಜಗದ್ಗುರು ತೋಂಟದಾರ್ಯ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಅಕ್ಟೋಬರ್ 3ರಂದು ಆಚರಿಸಲಾಗಿದೆ. ಜಿಲ್ಲೆಯಲ್ಲಿ ಇಲ್ಲಿಯವರೆಗೂ 9008 ನಾಯಿಕಡಿತ ಹಾಗೂ 1541 ಇತರೆ ಪ್ರಾಣಿಗಳ ಕಡಿತ ಪ್ರಕರಣಗಳು ವರದಿಯಾಗಿವೆ ಎಂದು ಡಾ. ವೆಂಕಟೇಶ ರಾಠೋಡ ಸಭೆಗೆ ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಯಾವುದೇ ನಾಯಿ ಕಡಿತದ ಪ್ರಕರಣಗಳು ದಾಖಲಾಗದೇ ಇದ್ದಲ್ಲಿ ಅಂತಹ ಪ್ರಕರಣಗಳನ್ನು ಪತ್ತೆ ಹಚ್ಚುವಲ್ಲಿ ಇಲಾಖಾಧಿಕಾರಿಗಳು ಸರ್ವೇ ಕಾರ್ಯಕ್ಕೆ ಮುಂದಾಗಬೇಕು. ಇದರ ವರದಿಯನ್ನು ಕೂಲಂಕುಷವಾಗಿ ಪರಿಶೀಲಿಸಿ ಮುಂದಿನ ಸಭೆಯಲ್ಲಿ ಮಾಹಿತಿ ಒದಗಿಸಬೇಕು. ನೀರಿನ ಮಾದರಿ ವಿಶ್ಲೇಷಣೆಗೆ ಸಂಬಂಧಿಸಿದಂತೆ ಕೇಂದ್ರೀಯ ಅಂತರ್ಜಲ ಮಂಡಳಿ ನೀರಿನ ಮಾದರಿ ರಾಸಾಯನಿಕ ವಿಶ್ಲೇಷಣೆ ಮಾಡಿದ್ದು, ಕೆಲವೊಂದು ಕಡೆ ಅರ್ಸೆನಿಕ್ ಯುರೇನಿಯಂ ಪ್ರಮಾಣ ಪರಿಮಿತಿಗಿಂತ ಹೆಚ್ಚಾಗಿರುವುದು ಕಂಡು ಬಂದಿರುತ್ತದೆ. ಅಂತಹ ಸ್ಥಳಗಳನ್ನು ಗುರುತಿಸಿ ಮಾದರಿಗಳನ್ನು ಶೇಖರಿಸಿ ಪರೀಕ್ಷಿಗೊಳಪಡಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾತನಾಡಿ, ಜಿಲ್ಲೆಯಲ್ಲಿ ಜನವರಿ 2025ರಿಂದ ನವೆಂಬರ್ 2025ರವರೆಗೆ 3929 ಕರುಳು ಬೇನೆ, 3774 ಟೈಫಾಯಿಡ್, 47 ಹೆಪಟೈಟೀಸ್ -ಎ, 118 ಡೆಂಘಿ ಹಾಗೂ 3 ಚಿಕುನ್ ಗುನ್ಯಾ ಪ್ರಕರಣಗಳು ವರದಿಯಾಗಿವೆ. ಜನವರಿ 2025ರಿಂದ ನವೆಂಬರ್ 2025ರವರೆಗೆ ಒಟ್ಟು 326804 ಸಂಶಯಾಸ್ಪದ ಮಲೇರಿಯಾ ರಕ್ತದ ಲೇಪನಗಳನ್ನು ಸಂಗ್ರಹಿಸಿದ್ದು, ಅದರಲ್ಲಿ 7 ಖಚಿತ ಪ್ರಕರಣಗಳು ವರದಿಯಾಗಿವೆ. ರೋಗಿಗಳಿಗೆ ಸೂಕ್ತ ಚಿಕಿತ್ಸೆ ಒದಗಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಹಾವು ಕಡಿತ, ಇಲಿ ಜ್ವರ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮ, ರಾಷ್ಟ್ರೀಯ ಅಯೋಡಿನ್ ಕೊರತೆಯ ನ್ಯೂನತೆಗಳ ನಿಯಂತ್ರಣಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ವೈ.ಕೆ. ಭಜಂತ್ರಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ, ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ, ಡಾ. ಅರುಂಧತಿ ಕುಲಕರ್ಣಿ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

### ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ

## ಕೆಲಸದ ಒತ್ತಡ ನಿವಾರಣೆಗೆ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಿ




ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷ ರವಿ ಗುಂಜಿಕರ ಮಾತನಾಡಿ, ಸರ್ಕಾರಿ ನೌಕರರ ಸಂಘ ಏರ್ಪಡಿಸುವ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕುಟುಂಬ ಸಮೇತ ಹಾಜರಾಗಿ ನಿತ್ಯದ ಒತ್ತಡದಿಂದ ಹೊರಬರಬೇಕು ಎಂದು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ವರ್ಷ ಪೂರ್ತಿ ಒತ್ತಡದಲ್ಲಿಯೇ ಕಾರ್ಯ ನಿರ್ವಹಿಸುವ ಸರ್ಕಾರಿ ನೌಕರರ ಒತ್ತಡ ನಿವಾರಣೆಗೆ ಜ. 3ರಂದು ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯಿಂದ ಸರ್ಕಾರಿ ನೌಕರರಿಗೆ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಹಬ್ಬವನ್ನು ಏರ್ಪಡಿಸಲಾಗಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಹೇಳಿದರು.

ಮಂಗಳವಾರ ನಗರದ ಪತ್ರಿಕಾಭವನದಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಲ್ಲಾ ಇಲಾಖೆಯಲ್ಲಿ ಸಾಕಷ್ಟು ಹುದ್ದೆಗಳು ಖಾಲಿಯಿದೆ. ಕಾರಣ, ಪ್ರಸ್ತುತ ಕಾರ್ಯ ನಿರ್ವಹಿಸುವ ಸರ್ಕಾರಿ ನೌಕರರಿಗೆ ಸಾಕಷ್ಟು ಒತ್ತಡವಿರುತ್ತದೆ. ಹಾಗಾಗಿ ವರ್ಷ ಪೂರ್ತಿ ಕೆಲಸದ ಒತ್ತಡದಲ್ಲಿರುವ ಸರ್ಕಾರಿ ನೌಕರರು ಕೆಲಸದ ಹೊರತಾಗಿ ರಾಜ್ಯ ಸರ್ಕಾರಿ ನೌಕರ ಸಂಘದ ವತಿಯಿಂದ ಏರ್ಪಡಿಸಿರುವ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವಂತೆ ತಿಳಿಸಿದರು.

ಈಗಾಗಲೇ ಕ್ರೀಡಾಕೂಟಕ್ಕೆ 1500ಕ್ಕೂ ಹೆಚ್ಚು ನೌಕರರು ನೋಂದಣಿ ಮಾಡಿಕೊಂಡಿದ್ದಾರೆ. ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ನೌಕರರು ನೋಂದಣಿ ಮಾಡಿಕೊಳ್ಳಬೇಕು. ಕ್ರೀಡಾಕೂಟದಲ್ಲಿ ಭಾಗವಹಿಸುವ ಎಲ್ಲಾ ನೌಕರರಿಗೂ ಊಟದ ವ್ಯವಸ್ಥೆ ಮಾಡಲಾಗಿದ್ದು, ಉತ್ಸಾಹದಿಂದ ನೌಕರರು ಭಾಗವಹಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ 2026ರ ವಿಶೇಷ ಕ್ಯಾಲೆಂಡರ್ ಬಿಡುಗಡೆಗೊಳಿಸಿ, ಜಿಲ್ಲೆಯಲ್ಲಿರುವ 9600 ಸರ್ಕಾರಿ ನೌಕರರಿಗೂ ಈ ವರ್ಷದ ಕ್ಯಾಲೆಂಡರ್ ತಲುಪಿಸಿ ಸಂಘ ಸದಾ ನೌಕರರ ನೋವು, ನಲಿವುಗಳಿಗೆ ಸ್ಪಂದಿಸುವುದೆಂದು ಭರವಸೆ ನೀಡಲಾಗವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಎಂ.ವಾಯ್. ಮಲಕಶೆಟ್ಟಿ, ಮಹಾಂತೇಶ ನಿಟ್ಟಾಲಿ, ಡಿ.ಎಸ್. ತಳವಾರ, ಸಿದ್ಧಪ್ಪ ಲಿಂಗದಾಳ, ದೇವಪ್ಪ ದುರಗಣ್ಣವರ, ಹನಮಂತರಾಜು ಕಂಟಿಗೊರ್ಣಣನವರ, ಆತ್ ಗಾಡಗೋಳಿ ಮುಂತಾದವರು ಹಾಜರಿದ್ದರು.

### ದ್ವೇಷ ಭಾಷಣ ತಡೆ ಮಸೂದೆ ಜಾರಿಗೆ ಹಿಂದೂ ಜನ ಜಾಗೃತಿ ಸಮಿತಿಯ ವಿರೋಧ

## ಮಸೂದೆ ಸಂವಿಧಾನಕ್ಕೆ ವಿರುದ್ಧವಾಗಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂದೂ ವಿರೋಧಿ ಕಾನೂನು ದ್ವೇಷ ಭಾಷಣ ತಡೆ ಮಸೂದೆ ಜಾರಿಗೆ ಹಿಂದೂ ಜನ ಜಾಗೃತಿಯ ವಿರೋಧವಿದ್ದು, ಇಂತಹ ಮಸೂದೆಗೆ ಅನುಮೋದನೆ ನೀಡಬಾರದು ಎಂದು ಹಿಂದೂ ಜನ ಜಾಗೃತಿ ಸಮಿತಿ ರಾಜ್ಯ ಸಮನ್ವಯಕ ಗುರುಪ್ರಸಾದಗೌಡ ಹೇಳಿದರು.

ಅವರು ಮಂಗಳವಾರ ಹಿಂದೂ ಜನ ಜಾಗೃತಿ ಸಮಿತಿ, ಹಿಂದೂ ಪರ ಸಂಘಟನೆ ಮೂಲಕ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ತಹಸೀಲ್ದಾರ ಧನಂಜಯ ಎಂ ಅವರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿ ಮಾತನಾಡಿದರು.

ವಿಧಾನಸಭೆಯಲ್ಲಿ ಅಂಗೀಕೃತಗೊಂಡಿರುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ತಡೆ) ವಿಧೇಯಕ, 2025ಕ್ಕೆ ರಾಜ್ಯಪಾಲರು ಅನುಮೋದನೆ ನೀಡಬಾರದು. ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ತಡೆ ವಿಧೇಯಕವು ಸ್ಪಷ್ಟತೆಯಿಲ್ಲದ ಹಾಗೂ ಸಂವಿಧಾನಕ್ಕೆ ವಿರುದ್ಧವಾದ ಕಾನೂನಾಗಿದೆ. ಜನರ ವಾಕ್ ಸ್ವಾತಂತ್ರ್ಯ ಮತ್ತು ಧಾರ್ಮಿಕ ಆಚರಣೆಗಳಿಗೆ ದೊಡ್ಡ ಅಪಾಯವಾಗುತ್ತದೆ. ವೇದ-ಶಾಸ್ತ್ರ ಉಲ್ಲೇಖ, ಧರ್ಮ ಪ್ರಚಾರ, ಧಾರ್ಮಿಕ ಚರ್ಚೆಗಳು ಮತ್ತು ಮತೀಯವಾದದ ಟೀಕೆಗಳಂತಹ ಸಾಮಾನ್ಯ ಧಾರ್ಮಿಕ ಚಟುವಟಿಕೆಗಳೇ ಸಮಸ್ಯೆಗೆ ಒಳಗಾಗುವ ಭೀತಿ ಇದೆ. ಸಾಮಾಜಿಕ ಬದಲಾವಣೆಗೆ ಶ್ರಮಿಸುವ ಸಾಧು-ಸಂತರ, ಪತ್ರಕರ್ತರ, ಸಮಾಜ ಸುಧಾರಕ-ಕಾರ್ಯಕರ್ತರ ಮೇಲೆ ವಿನಾಕಾರಣ ▶▶3ನೇ ಪುಟಕ್ಕೆ

### ಆಡಳಿತಾಧಿಕಾರಿ ಎ.ಎ. ಕಂಬಾಳಿಮಠ ಅಧ್ಯಕ್ಷತೆಯಲ್ಲಿ ತಾಲೂಕು ಪಂಚಾಯಿತಿ ಸಾಮಾನ್ಯ ಸಭೆ

## ಅಧಿಕಾರಿಗಳು ಎಚ್ಚರದಿಂದ ಕಾರ್ಯ ನಿರ್ವಹಿಸಿ




ಎಸ್‌ಎಸ್‌ಎಲ್‌ಸಿಯಲ್ಲಿ ವಿದ್ಯಾರ್ಥಿಗಳು ಒಳ್ಳೆಯ ಅಂಕ ಗಳಿಸುತ್ತಾರಾದರೂ, ಮುಂದೆ ಪಿಯುಸಿಯಲ್ಲಿ ಕಡಿಮೆ ಅಂಕ ಗಳಿಸುತ್ತಿರುವುದು ಸಾಮಾನ್ಯವಾಗಿದ್ದು, ಇದನ್ನು ಹೋಗಲಾಡಿಸುವುದಕ್ಕೆ ಶಾಲಾ-ಕಾಲೇಜುಗಳ ಹಂತದಲ್ಲಿ ವಿದ್ಯಾರ್ಥಿಗಳಿಗೆ ನೀಟ್, ಸಿಇಟಿ, ಐಐಟಿ ಜೊತೆಗೆ ಕೇಂದ್ರ ಸರಕಾರದ ವಿವಿಧ ಇಲಾಖೆಗಳಲ್ಲಿಯ ಕೆಲಸಗಳ ಬಗ್ಗೆ ಈಗಿನಿಂದಲೇ ಜಾಗೃತಿ ಮೂಡಿಸುವ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ನೆರೆ ರಾಜ್ಯಗಳಲ್ಲಿಯಂತೆ ನಮ್ಮ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸಹ ಮುಖ್ಯವಾಹಿನಿಗೆ ಬರುವುದಕ್ಕೆ ಪೂರಕ ವಾತಾವರಣ ನಿರ್ಮಿಸಬೇಕೆಂದು ಬಿಇಓ ಅವರಿಗೆ ಕಂಬಾಳಿಮಠ ಸೂಚಿಸಿದರು.

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚೆಗೆ ಶಿರಹಟ್ಟಿಯ ಬಿಇಓ ಕಚೇರಿಯಲ್ಲಿ ಲೋಕಾಯುಕ್ತರ ದಾಳಿ, ರೇಷ್ಮೆ ಇಲಾಖೆಯ ಅವಾಂತರ, ಮಧ್ಯವರ್ತಿಗಳಿಂದ ಬೆಳೆ ವಿಮೆಯಲ್ಲಿ ಸಾಕಷ್ಟು ವಿಷಯಗಳು ಚರ್ಚೆಗೆ ಗ್ರಾಸವಾಗುತ್ತಿದ್ದು, ಇದು ಒಳ್ಳೆಯ ಬೆಳವಣಿಗೆಯಲ್ಲ. ದಿನದಿಂದ ದಿನಕ್ಕೆ ತಾಲೂಕು ಸೂಕ್ಷ್ಮ ವಲಯವಾಗಿ ಹೊರಹೊಮ್ಮುತ್ತಿದೆ. ಆದ್ದರಿಂದ ಅಧಿಕಾರಿಗಳು ಎಚ್ಚರದಿಂದ ಕಾರ್ಯ ನಿರ್ವಹಿಸಬೇಕೆಂದು ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಹಾಗೂ ಶಿರಹಟ್ಟಿ ತಾಲೂಕು ಪಂಚಾಯಿತಿ ಆಡಳಿತಾಧಿಕಾರಿ ಎ.ಎ. ಕಂಬಾಳಿಮಠ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ತಾ.ಪಂ ಸಾಮರ್ಥ್ಯ ಸೌಧದಲ್ಲಿ ಜರುಗಿದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಾನು ಶಿರಹಟ್ಟಿ ತಾ.ಪಂ ಆಡಳಿತಾಧಿಕಾರಿಯಾಗಿರುವ ಸಂದರ್ಭದಲ್ಲಿ ತಾಲೂಕಿನಲ್ಲಿ ಇಂತಹ ಬೆಳವಣಿಗೆಗಳು ಆಗುತ್ತಿರುವುದು ವಿಷಾದನೀಯ. ಮುಂದಿನ ದಿನಗಳಲ್ಲಿ ಅಧಿಕಾರಿಗಳು ಇಂತಹ ಘಟನೆಗಳು ಮರುಕಳಿಸದಂತೆ ಆಯಾ ಇಲಾಖೆಯ ಅನುಷ್ಠಾನಾಧಿಕಾರಿಗಳು ಕೆಲಸ ಮಾಡಬೇಕು. ಪ್ರಗತಿ ಪರಿಶೀಲನೆಯಂತಹ ಸಭೆಗಳಲ್ಲಿ ಭಾಗವಹಿಸುವ ಸಂದರ್ಭದಲ್ಲಿ ತಮ್ಮ ಇಲಾಖೆಯ ಸಂಪೂರ್ಣ ಮಾಹಿತಿಯನ್ನು ಹೊಂದಿರಬೇಕು. ಸಂಪೂರ್ಣ ▶▶3ನೇ ಪುಟಕ್ಕೆ

## ಮೆಕ್ಕೆಜೋಳ ಖರೀದಿಯಲ್ಲಿ 'ಮಾಮೂಲಿ' ಸಮಸ್ಯೆ!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಟಿಎಪಿಸಿಎಂಎಸ್‌ನ ಮೆಕ್ಕೆಜೋಳ ಖರೀದಿ ಕೇಂದ್ರದಲ್ಲಿ ಮೆಕ್ಕೆಜೋಳದ ಗುಣಮಟ್ಟ ಪರೀಕ್ಷೆಯ ನೆಪದಲ್ಲಿ ಅಲ್ಲಿನ ಸಿಬ್ಬಂದಿಗಳು ರೈತರಿಂದ ಹಣ ವಸೂಲಿ ಮಾಡುತ್ತಿದ್ದಾರೆ. ಮಾಮೂಲು ಕೊಟ್ಟರೆ ಕ್ವಾಲಿಟಿ ಚೆನ್ನಾಗಿದೆ ಎಂದು, ಕೊಡದಿದ್ದರೆ ಕ್ವಾಲಿಟಿ ನೆಪದಲ್ಲಿ ಖರೀದಿ ತಿರಸ್ಕಾರ ಮಾಡುತ್ತಿದ್ದಾರೆ ಎಂದು ಸಮಗ್ರ ರೈತಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಮಂಜುನಾಥ ಮಾಗಡಿ ಹಾಗೂ ರೈತ ಮುಖಂಡ ರವಿಕಾಂತ ಅಂಗಡಿ ಆರೋಪಿಸಿದರು.

ಅವರು ಮಂಗಳವಾರ ಪಟ್ಟಣದ ಪತ್ರಿಕಾ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ನೋಂದಣಿ ಮಾಡಿಕೊಂಡ ರೈತರ ಮೆಕ್ಕೆಜೋಳ ಖರೀದಿಯಾಗುತ್ತಿಲ್ಲ. ಸರದಿ ಸಾಲಿನಲ್ಲಿ 8-10 ದಿನ ನಿಂತರೆ ನಿತ್ಯ ಸಾವಿರ ರೂ ಟ್ರ್ಯಾಕ್ಟರ್ ಬಾಡಿಗೆ ಕೊಡಬೇಕು. ಇದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಹೆಸರ ಮೇಲೆ ದುಡ್ಡು ಮಾಡುತ್ತಿದ್ದಾರೆ. ರೈತರಿಗೆ ಉತ್ತಮ ಬೆಲೆ ಸಿಗಬೇಕು ಎಂದು ಹೋರಾಟ ಮಾಡಿದರೆ ಅದರ ಲಾಭ ಬಂಡವಾಳಶಾಹಿಗಳಿಗೆ ಸಿಗುತ್ತಿದೆ. ಖರೀದಿ ಕೇಂದ್ರದಲ್ಲಿ ಯಾರೂ ಕೇಳುವವರೇ ಇಲ್ಲದಂತಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆ ಬಗೆಹರಿಸದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ರೈತ ಮುಖಂಡ ನಾಗರಾಜ ಚಿಂಚಲಿ ಮಾತನಾಡಿ, ಸೊಸೈಟಿ ಮುಂದೆ ಇಟ್ಟುಕೊಂಡು ರೈತರ ಬಳಿ ಸುಲಿಗೆ ಮಾಡುತ್ತಿದ್ದಾರೆ. 8-10 ದಿನದಿಂದ ಮೆಕ್ಕೆಜೋಳ ತಂದು ಪಾಳಿಯಲ್ಲಿ ನಿಂತರೂ ಇಲ್ಲದ ಕಾರಣ ಹೇಳಿ ಮಹಸೂಲು ತಿರಸ್ಕಾರ ಮಾಡುತ್ತಿದ್ದಾರೆ. ಸರ್ಕಾರದ ಸ್ಪಷ್ಟ ಆದೇಶದ ನಡುವೆಯೂ ರೈತರಿಗೆ ಅನ್ಯಾಯವಾಗುತ್ತಿದ್ದು, ಅದನ್ನು ಸರಿಪಡಿಸಬೇಕು ಎಂದು ಹೇಳಿದರು.

ಈ ವೇಳೆ ಪೂರ್ಣಾಜಿ ಖರಾಟೆ, ಬಸವರಾಜ ಹಿರೇಮನಿ, ಟಾಕಪ್ಪ ಸಾತಪುತೆ, ಪ್ರಕಾಶ ಗುತ್ತಲ, ಮಂಜುನಾಥ ಮುಳುಗುಂದ, ಫಕ್ಕೀರಯ್ಯ ಹಿರೇಮಠ ಮುಂತಾದವರು ಇದ್ದರು.




### ಭಾವಸಾರ ವ್ಹಿಜನ್ ಇಂಡಿಯಾದ 'ಬೆಳ್ಳಿ ಹಬ್ಬ' ಸಂಭ್ರಮಾಚರಣೆ

## ಡಾ. ದತ್ತಾತ್ರೇಯ ವೈಕುಂಠೆಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ನಿಮ್ಹಾನ್ಸ್ ಕನ್ವೆನ್ಷನ್ ಹಾಲ್‌ನಲ್ಲಿ ಜರುಗಿದ ಭಾವಸಾರ ವ್ಹಿಜನ್ ಇಂಡಿಯಾದ 25ನೇ ವರ್ಷದ ಬೆಳ್ಳಿ ಹಬ್ಬ ಸಮಾರಂಭದಲ್ಲಿ ಗದುಗಿನ ರಕ್ತ ತಪಾಸಿಗ ಡಾ. ದತ್ತಾತ್ರೇಯ ವೈಕುಂಠೆ ಅವರು ಅತ್ಯಧಿಕ ಉಚಿತ ರಕ್ತತಪಾಸಣಾ ಶಿಬಿರಗಳನ್ನು ಕೈಗೊಂಡಿದ್ದಕ್ಕಾಗಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಭಾವಸಾರ ವ್ಹಿಜನ್ ಇಂಡಿಯಾದ ಸಂಸ್ಥಾಪಕ ನಾರಾಯಣರಾವ್ ತಾತುಸ್ಕರ್ ಮಾತನಾಡಿ, ಗದುಗಿನ ಡಾ. ದತ್ತಾತ್ರೇಯ ವೈಕುಂಠೆ ಅವರು ಕಳೆದ 12 ವರ್ಷಗಳಿಂದ ಗದಗ ಜಿಲ್ಲೆಯಲ್ಲಿ ವಿವಿಧೆಡೆ ಸುಮಾರು 400ಕ್ಕೂ ಹೆಚ್ಚು ಉಚಿತ ರಕ್ತತಪಾಸಣಾ ಶಿಬಿರ ನಡೆಸಿ ಅಂದಾಜು 3 ಲಕ್ಷಕ್ಕೂ ಹೆಚ್ಚು ಜನರನ್ನು ತಪಾಸಣೆ ಒಳಪಡಿಸಿದ್ದಲ್ಲದೆ, 65 ಸಲ ರಕ್ತದಾನ ಮಾಡುವ ಮೂಲಕ ಸಾರ್ವಜನಿಕರಲ್ಲಿ ರಕ್ತದಾನದ ಬಗ್ಗೆ ಜಾಗೃತಿ ಮೂಡಿಸುತ್ತಿರುವುದು ಅಭಿನಂದನೀಯ ಎಂದರು.

ಇಂತಹ ಮಹನೀಯರು ನಮ್ಮ ಭಾವಸಾರ ವ್ಹಿಜನ್ ಮೂಲಕ ಉಚಿತ ರಕ್ತತಪಾಸಣಾ ಶಿಬಿರಗಳನ್ನು ನಿರಂತರವಾಗಿ ನಡೆಸಿಕೊಂಡು ಬಂದಿರುವದು ಶ್ಲಾಘನೀಯ. ಬೆಂಗಳೂರಿನಲ್ಲಿ ನಡೆದ ವ್ಹಿಜನ್‌ನ ಬೆಳ್ಳಿ ಹಬ್ಬದ ಕಾರ್ಯಕ್ರಮದ ಸಂದರ್ಭದಲ್ಲೂ ▶▶3ನೇ ಪುಟಕ್ಕೆ



ವೈಕುಂಠ ಏಕಾದಶಿ ನಿಮಿತ್ತ ಗದಗ ನಗರದ ಗಂಗಾಪುರ್ ಪೇಟ್ ಓಣಿಯಲ್ಲಿ (ಅಂಜಲಿ ಕಬಾಡಿ, ಪಾಯಲ್ ಕಬಾಡಿ) ಶ್ರೀ ವೆಂಕಟೇಶ್ವರ ಲಕ್ಷ್ಮೀದೇವರ ಅವತಾರದಲ್ಲಿ ಪುಟ್ಟ ಮಕ್ಕಳು ಗಮನ ಸೆಳೆದರು. ಈ ಮಕ್ಕಳನ್ನು ನೋಡುತ್ತಿದ್ದರೆ ಭಕ್ತಿ ಭಾವನೆ ಮೂಡಿ ಬರುತ್ತದೆ. ಮಕ್ಕಳಿಗೆ ಇಂತಹ ದೇವರ ವೇಷ-ಭೂಷಣ ಹಾಕಿಸುವುದರಿಂದ ಮಕ್ಕಳಲ್ಲಿ ಸನಾತನ ಹಿಂದೂ ಧರ್ಮದ ಹಾಗೂ ದೇವರ ಬಗ್ಗೆ ಭಕ್ತಿ ಭಾವನೆ ಮೂಡುತ್ತದೆ. ಪ್ರತಿಯೊಬ್ಬರೂ ಮಕ್ಕಳನ್ನು ಈ ರೀತಿ ವೇಷ-ಭೂಷಣ ಹಾಕಿಸಿ ಹಿಂದೂ ಧರ್ಮದ ಸಂಸ್ಕಾರದ ಬಗ್ಗೆ ಅರಿವು ಮೂಡಿಸಿ ಎಂದು ಕ್ರಾಂತಿ ಸೇನಾ ಗದಗ ಜಿಲ್ಲಾ ಅಧ್ಯಕ್ಷ ಬಾಬು ಬಾಕಳೆ ವಿನಂತಿಸಿದ್ದಾರೆ.



ಪ್ರಧಾನಮಂತ್ರಿ ನರೇಂದ್ರ ಮೋದಿಯವರ 'ಮನ್ ಕೀ ಬಾತ್' 2025ನೇ ಸಾಲಿನ ಕೊನೆಯ 129ನೇ ಸಂಚಿಕೆಯ ಕಾರ್ಯಕ್ರಮವನ್ನು 4ನೇ ವಾರ್ಡ್‌ನ ಬೂತ್ ಸಂಖ್ಯೆ 24, 25, 26, 27 ಹಾಗೂ 28ರಲ್ಲಿ ಮನ್ ಕೀ ಬಾತ್ ಗದಗ ಜಿಲ್ಲಾ ಸಂಚಾಲಕ ರಾಚಯ್ಯ ಹೊಸಮಠ ಇವರ ನೇತೃತ್ವದಲ್ಲಿ ವೀಕ್ಷಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಭಾರತೀಯ ಜನತಾ ಪಕ್ಷದ ಪ್ರಮುಖರಾದ ಶ್ರೀಪತಿ ಉಡುಪಿ, ದೇವೇಂದ್ರಪ್ಪ ಗೋಟೂರ, ಮಂಜುನಾಥ ತಳವಾರ, ಶಂಕರ ಕಾಕಿ, ಮಂಜಣ್ಣ ಮಾದಗುಂಡಿ, ಕೃಷ್ಣ ಚಿಂತಾ, ಲಕ್ಷ್ಮಣ ವಾಲ್ಮೀಕಿ, ಶಿವು ಗೋಟೂರ ಭಾಗವಹಿಸಿದ್ದರು.

### ವಿಜಯಪುರ ಕೃಷಿ ಕಾಲೇಜಿನ ಆವರಣದಲ್ಲಿ ಜನವರಿ 4ರಿಂದ 6ರವರೆಗೆ ಕೃಷಿಮೇಳ

# ರೈತ ಬಂಧುಗಳ ಸಮಾಗಮ 'ಕೃಷಿ ಮೇಳ'

ಉತ್ತರ ಕರ್ನಾಟಕದ ಅತ್ಯಂತ ಪ್ರಮುಖವಾದ ಅರೆ-ಶುಷ್ಕ ಪ್ರದೇಶಗಳಲ್ಲಿ ಒಂದಾದ ವಿಜಯಪುರ ಜಿಲ್ಲೆಯು ಇತ್ತೀಚಿನ ದಿನಗಳಲ್ಲಿ ವಿರಳ, ಅನಿಶ್ಚಿತ, ಅನಿಯಮಿತ ಮಳೆ, ಬರಗಾಲ ಮತ್ತು ಭಾರೀ ಮಳೆಯಿಂದ ತತ್ತರಿಸುವದರಿಂದ ರೈತರು ತ್ರೀವ ಬೆಳೆ ಆರ್ಥಿಕ ನಷ್ಟವನ್ನು ಎದುರಿಸುವಂತೆ ಮಾಡಿದೆ.

ಇಂತಹ ಬದಲಾಗುತ್ತಿರುವ ಹವಾಮಾನ ಸನ್ನಿವೇಶದ ಏರಿಳಿತಗಳನ್ನು ನಿಭಾಯಿಸಲು ನಿರಂತರ ಕೃಷಿ ಸಂಶೋಧನೆ ಮತ್ತು ವಿಸ್ತರಣೆಯ ಮೂಲಕ ರೈತರಿಗೆ ಉತ್ತಮ ತಾಂತ್ರಿಕ ಬೆಂಬಲ ಹಾಗೂ ಆಧುನಿಕ ಕೃಷಿ ತಂತ್ರಜ್ಞಾನದ ಅಗತ್ಯವಿದೆ. ಈ ದಿಶೆಯಲ್ಲಿ ವಿಜಯಪುರದ ಕೃಷಿ ಸಂಶೋಧನಾ ಕೇಂದ್ರವು ಒಣ ಭೂಮಿ ಕೃಷಿಯ ಸಂಶೋಧನೆಯ ಉದ್ದೇಶಕ್ಕಾಗಿ ಸ್ಥಾಪಿಸಿತು. ಈ ಕೇಂದ್ರವು ಪ್ರಸ್ತುತ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾದೇಶಿಕ ಕೃಷಿ ಸಂಶೋಧನಾ ಕೇಂದ್ರವೆಂದು ಈಗ ಮರುನಾಮಕರಣಗೊಂಡಿತು. ವಿಜ್ಞಾನಿಗಳ ಸತತ ವೈಜ್ಞಾನಿಕ ಸಂಶೋಧನೆಗಳಿಂದ ಸಂಶೋಧನಾ ಕೇಂದ್ರವು ಅನೇಕ ರಾಷ್ಟ್ರೀಯ ಮನ್ನಣೆಗಳನ್ನು ಪಡೆದಿದೆ.

ರೈತ ಸಮುದಾಯದ ಅಕಾಂಕ್ಷೆಗಳು, ದಾರ್ಶನಿಕರು, ಸ್ಥಳೀಯ ರಾಜಕೀಯ ನಾಯಕರು ನೀತಿ ನಿರೂಪಕರು ಹಾಗೂ ಸರ್ಕಾರ ಮಾಡಿದ ಪ್ರಯತ್ನಗಳ ಫಲವಾಗಿ ಈ ಪ್ರದೇಶದಲ್ಲಿ ರೈತ ಮಕ್ಕಳಿಗೆ ಕೃಷಿ ಶಿಕ್ಷಣವನ್ನು ನೀಡುವ



ಪರಿಣಾಮವಾಗಿ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಅಡಿಯಲ್ಲಿ ಕೃಷಿ ಕಾಲೇಜನ್ನು 25ನೇ ಅಕ್ಟೋಬರ್ 1990ರಂದು ವರದನ್ ಸಮಿತಿಯ ಶಿಪಾರಸ್ಸು ಪ್ರಕಾರ ಸ್ಥಾಪನೆಯಾಯಿತು. ರೈತರಿಗೆ ಅಗತ್ಯವಿರುವ ಕೃಷಿ ತಂತ್ರಜ್ಞಾನಗಳನ್ನು ಪರಿಣಾಮಕಾರಿಯಾಗಿ ಅಭಿವೃದ್ಧಿಪಡಿಸುತ್ತಿವೆ ಮತ್ತು ಇದೇ ಅವರಣದಲ್ಲಿ ಕೃಷಿ ವಿಜ್ಞಾನ ಕೇಂದ್ರವಿರುವದರಿಂದ ಕೃಷಿ ತೆ-ೂೀಟಗಾರಿಕೆ, ಪಶುಸಂಗೋಪಣೆಯಲ್ಲಿ ತರಬೇತಿಗಳನ್ನು ಅಯೋಜಿಸುವದು, ಉತ್ತಮ ಪ್ರಾತ್ಯಕ್ಷಿಕೆಗಳನ್ನು ಕೈಗೊಂಡು ರೈತರ ಅನುಕೂಲಕ್ಕಾಗಿ ತಂತ್ರಜ್ಞಾನಗಳನ್ನು ತ್ವರಿತಗತಿಯಲ್ಲಿ ನೀಡುತ್ತಿವೆ. ಇದಲ್ಲದೆ ಆವರಣದಲ್ಲಿ ರಾಜ್ಯ ಕೃಷಿ ಇಲಾಖೆ ಕಚೇರಿಯನ್ನು ಸಹ ಒಳಗೊಂಡಿದೆ ಮತ್ತು ತಂತ್ರಜ್ಞಾನ ವರ್ಗಾವಣೆಯನ್ನು ನೀಡುವ ಜಿಲ್ಲಾ ಕೃಷಿ ತರಬೇತಿ ಕೇಂದ್ರವನ್ನು ಸಹ ಹೊಂದಿದೆ.

ಇಂತಹ ಉತ್ತಮವಾಗಿ ಅಭಿವೃದ್ಧಿ ಹೊಂದಿದ ಸಂಸ್ಥೆಯಲ್ಲಿ ಪ್ರತಿ ವರ್ಷ ಹಿಂಗಾರು ಹಂಗಾಮಿನ ಕೊನೆಯ ಡಿಸೆಂಬರ್‌ನಲ್ಲಿ ಅತೀ ದೊಡ್ಡ 'ಕೃಷಿಮೇಳ'ವನ್ನು ನಡೆಸಲಾಗುತ್ತದೆ. ಈ ಮೇಳದಲ್ಲಿ ಕೃಷಿ ಸಮುದಾಯಕ್ಕೆ ಬೇಕಾದ ಆಧುನಿಕ ಕೃಷಿ ತಂತ್ರಜ್ಞಾನ, ಇದು ಕೃಷಿ ಕ್ಷೇತ್ರದಲ್ಲಿ ಆದ ನಾವೀನ್ಯತೆಗಳು ಪ್ರದರ್ಶಿಸಲು ಮತ್ತು ಪ್ರಸಾರ ಮಾಡಲು ಅನೇಕ ಸಾರ್ವಜನಿಕ ಹಾಗೂ ಖಾಸಗಿ ವಲಯಗಳ ಕೃಷಿ ಉದ್ಯಮಿಗಳು, ಕೃಷಿ ವೃತ್ತಿಪರರು ಮತ್ತು ಸಂಬಂಧಿತ ಸಂಸ್ಥೆಗಳು ಭಾಗವಹಿಸುವದರಿಂದ ಅನೇಕ ಪ್ರಯೋಜನಗಳಾಗುತ್ತಿವೆ.

ಈ ವರ್ಷ ವಿಜಯಪುರ ಕೃಷಿ ಕಾಲೇಜಿನ ಆವರಣದಲ್ಲಿ 'ಕೃಷಿಯಲ್ಲಿ ನಾವೀನ್ಯತೆಗಳು ಮತ್ತು ನವೋದ್ಯಮಗಳು' ಎಂಬ ಘೋಷ್ಯವಾಕ್ಯದ ಅಡಿಯಲ್ಲಿ 2026ರ ಜನವರಿ 4ರಿಂದ 6ರವರೆಗೆ ಕೃಷಿಮೇಳವನ್ನು ಆಯೋಜಿಸಲಾಗಿದೆ. ಆವರಣದಲ್ಲಿ ಕೈಗೊಳ್ಳಲಾದ ಸಂಶೋಧನೆ, ವಿಸ್ತರಣೆ ಮತ್ತು ಭೋದನಾ ಚಟುವಟಿಕೆಗಳ ಬಗ್ಗೆ ಸಮಗ್ರ ಮಾಹಿತಿಯನ್ನು ರೈತ ಸಮುದಾಯಕ್ಕೆ ತಿಳಿಸಲಾಗುತ್ತದೆ. ವಿವಿಧ ಕ್ಷೇತ್ರ ಪ್ರಯೋಗಗಳು ಮತ್ತು ಪ್ರದರ್ಶನಗಳ ಮೂಲಕ ರೈತರಲ್ಲಿ ಜಾಗೃತಿ ಮೂಡಿಸಲು ಬಿಡುಗಡ 'ಯಾದ/ಬಿಡುಗಡಯಾಗಲಿರುವ ತಂತ್ರಜ್ಞಾನಗಳನ್ನು ಪ್ರದರ್ಶಿಸಲಾಗುತ್ತದೆ.

ಒಟ್ಟಾರೆಯಾಗಿ 2026ರ ಕೃಷಿಮೇಳವು ಉತ್ತರ ಕರ್ನಾಟಕದ ಹೆಚ್ಚಿನ ಸಂಖ್ಯೆಯ ರೈತರಿಗೆ ಇಂದಿನ ಕೃಷಿಯಲ್ಲಿನ ಹೊಸ ಅವಿಷ್ಕಾರಗಳ ಮೇಲೆ ಹೆಚ್ಚಿನ ಒತ್ತು ನೀಡುವ ಮೂಲಕ ವ್ಯಾಪಕ ಮಾಹಿತಿಯನ್ನು ವಿಜಯಪುರ ಆವರಣದಲ್ಲಿ ಮೂರು ದಿನಗಳ ಕಾಲ ನಡೆಯುವ ಕೃಷಿಮೇಳದಲ್ಲಿ ಒದಗಿಸುವ ನಿರೀಕ್ಷೆಯಿದೆ. ಹಿಂದಿನ ವರ್ಷಗಳಂತೆ ಈ ಕೃಷಿಮೇಳದಲ್ಲಿ ಮಣ್ಣಿನ ಆರೋಗ್ಯ ಮತ್ತು ನೀರಿನ ಸಂರಕ್ಷಣೆ, ಉತ್ತಮ ಬೆಳೆ ಕಾಲುವೆ ಪದ್ಧತಿಗಳು, ಜಾನುವಾರಗಳನ್ನು ಒಳಗೊಂಡ ಸಮಗ್ರ ಕೃಷಿ ಪದ್ಧತಿಗಳು ಸಾವಯವ, ನೈಸರ್ಗಿಕ ಕೃಷಿ ಪದ್ಧತಿ, ಕೃಷಿಯಲ್ಲಿ ಯಾಂತ್ರೀಕರಣ (ಡ್ರೋನ್ ತಂತ್ರಜ್ಞಾನ ಸೇರಿದಂತೆ) ಹವಾಮಾನ ವೈಪರೀತ್ಯಗಳ ನಿರ್ವಹಣೆ ಮತ್ತು ಅದರ ಪ್ರಕೋಪಗಳ ತಗ್ಗಿಸುವಿಕೆ, ಮಾರುಕಟ್ಟೆ ಬುದ್ಧಿಮತ್ತೆ ಮತ್ತು ಅರ್ಥಿಕ ಭದ್ರತೆ ಇತ್ಯಾದಿಗಳ ಕುರಿತು ಕೃಷಿ ತಂತ್ರಜ್ಞಾನಗಳನ್ನು ಪಡೆಯಲು ಮತ್ತು ನವೀಕರಿಸಲು ಈ ಪ್ರದೇಶದ ಹೆಚ್ಚಿನ ರೈತರನ್ನು ಆಕರ್ಷಿಸುವ ನಿರೀಕ್ಷೆ ಇದೆ.

ಕೃಷಿ ಮೇಳವನ್ನು ಜ. 4ರಂದು ಬೆಳಿಗ್ಗೆ 11 ಗಂಟೆಗೆ ಕೃಷಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಉದ್ಘಾಟಿಸಲಿದ್ದಾರೆ. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಮತ್ತು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟಿಲ ಕೃಷಿ ವಸ್ತುಪ್ರದರ್ಶನ ಉದ್ಘಾಟಿಸಲಿದ್ದು, ಕೃಷಿ ಪ್ರಕಟಣೆಗಳ ಬಿಡುಗಡೆಯನ್ನು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್.ಪಾಟೀಲ ನೇರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ನಾಗಠಾಣ ಮತಕ್ಷೇತ್ರದ ಶಾಸಕರಾದ ವಿಠ್ಠಲ ಕಟಕದೊಂಡ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾನ್ಯ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ರವಿಕುಮಾರ ಎನ್, ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಪ್ರಕಾಶ ಬಿ.ಹುಕ್ಕೇರಿ, ಸಂಸದರಾದ ರಮೇಶ ಜಿಗಜಿಣಗಿ, ಡಾ. ಸುಧಾ ಮೂರ್ತಿ, ಜಿಲ್ಲೆಯ ಎಲ್ಲ ವಿಧಾನಸಭೆ ಶಾಸಕರು ಮತ್ತು ವಿಧಾನ ಪರಿಷತ್ ಶಾಸಕರು ಭಾಗವಹಿಸಲಿದ್ದಾರೆ. ಧಾರವಾಡ ಕೃಷಿ ವಿ.ವಿ ಕುಲಪತಿ ಡಾ. ಪಿ.ಎಲ್. ಪಾಟೀಲ, ಧಾರವಾಡ ಕೃಷಿ ವಿ.ವಿ ವ್ಯವಸ್ಥಾಪನಾ ಮಂಡಳಿ ಸದಸ್ಯರು ಭಾಗವಹಿಸಲಿದ್ದಾರೆ. ಜಿಲ್ಲಾಧಿಕಾರಿ ಡಾ. ಆನಂದ, ಸಿ.ಇ.ಓ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಆಗಮಿಸಲಿದ್ದಾರೆ.

# ಅಂಜೆಲ್ ಚಕ್ಮಾ ಜನಾಂಗೀಯ ಹತ್ಯೆ; ತ್ರಿಪುರಾದಲ್ಲಿ ತೀವ್ರಗೊಂಡ ಪ್ರತಿಭಟನೆ

**■ ವಿಜಯಸಾಕ್ಷಿ ಸುದ್ದಿ, ತ್ರಿಪುರಾ**

ಅಂಜೆಲ್ ಚಕ್ಮಾ ಜನಾಂಗೀಯ ಹತ್ಯೆ ಖಂಡಿಸಿ ತ್ರಿಪುರಾದಲ್ಲಿ ಪ್ರತಿಭಟನೆಗಳು, ಮೇಣದಬತ್ತಿ ಜಾಗೃತಿ ಮುಂದುವರೆದಿದೆ. ಹತ್ಯೆ ಸಂಬಂಧ ಪೊಲೀಸರು ಆರಂಭದಲ್ಲಿ ಎಫ್‌ಐಆರ್ ದಾಖಲಿಸುವಲ್ಲಿ ವಿಫಲರಾಗುವ ಮೂಲಕ ಅಪರಾಧದ ಸಾಕ್ಷಿಗಳನ್ನು ದುರ್ಬಲಗೊಳಿಸಲು ಪ್ರಯತ್ನಿಸಿದ್ದಾರೆ ಎಂದು ಅಖಿಲ ಭಾರತ ಚಕ್ಮಾ ವಿದ್ಯಾರ್ಥಿ ಸಂಘ ಹೇಳಿದೆ.




ಡಿಸೆಂಬರ್ 26 ರಂದು ಜನಾಂಗೀಯ ಹೇಳಿಕೆಗಳನ್ನು ವಿರೋಧಿಸಿದ ನಂತರ ಡೆಹ್ರಾಡೂನ್‌ನಲ್ಲಿ ಕ್ರೂರವಾಗಿ ಹಲ್ಲೆಗೊಳಗಾಗಿ ಚಿಕಿತ್ಸೆಯ ಸಮಯದಲ್ಲಿ ಸಾವನ್ನಪ್ಪಿದ 24 ವರ್ಷದ ವಿದ್ಯಾರ್ಥಿ ಅಂಜೆಲ್ ಚಕ್ಮಾ ಸಾವಿನ ವಿರುದ್ಧ ತ್ರಿಪುರಾದ ಹಲವಾರು ಪ್ರದೇಶಗಳಲ್ಲಿ ಮೇಣದಬತ್ತಿ ಜಾಗೃತಿ, ರ‍್ಯಾಲಿಗಳು ಮತ್ತು ಪ್ರತಿಭಟನೆ ಮುಂದುವರೆದಿವೆ.

ತ್ರಿಪುರ ಸರ್ಕಾರವು ಚಕ್ಮಾ ಅವರ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರ ಮಂಜೂರು ಮಾಡಿದೆ. ತ್ರಿಪುರ ಮುಖ್ಯಮಂತ್ರಿ ಮಾಣಿಕ್ ಸಹಾ ಸೋಮವಾರ ಪ್ರಕಟಿಸಿದರು.

ವಿದ್ಯಾರ್ಥಿಯ ಹತ್ಯೆಯ ಕುರಿತು ಸಹಾ ಎರಡನೇ ಬಾರಿಗೆ ತಮ್ಮ ಉತ್ತರಾಖಂಡ್ ಪ್ರತಿರೂಪ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ಮಾತನಾಡಿದರು. ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಕ್ರಮಗಳನ್ನು ಚರ್ಚಿಸಿದರು.

"ದಿವಂಗತ ಅಂಜೆಲ್ ಚಕ್ಮಾ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ಸಂಜೆ ಗೌರವಾನ್ವಿತ ಉತ್ತರಾಖಂಡ್ ಮುಖ್ಯಮಂತ್ರಿ ಶ್ರೀ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ಮಾತನಾಡಿದ್ದೇನೆ. ಘಟನೆಯಲ್ಲಿ ಭಾಗಿಯಾಗಿರುವ ಎಲ್ಲರನ್ನು ನ್ಯಾಯದ ಕಟಕಟೆಗೆ ತರಲಾಗುವುದು, ಕಾನೂನು ತನ್ನ ಕ್ರಮ ಕೈಗೊಳ್ಳುತ್ತದೆ ಎಂದು ಅವರು ಭರವಸೆ ನೀಡಿದ್ದಾರೆ. ಈ ದುಃಖದ ಸಮಯದಲ್ಲಿ, ನಾವು ದುಃಖಿತ ಕುಟುಂಬದೊಂದಿಗೆ ದೃಢವಾಗಿ ನಿಲ್ಲುತ್ತೇವೆ" ಎಂದು ಮುಖ್ಯಮಂತ್ರಿ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ.

"ತ್ರಿಪುರ ಸರ್ಕಾರದ ಪರವಾಗಿ, ಕುಟುಂಬಕ್ಕೆ ಒಂದು ಬಾರಿ 5 ಲಕ್ಷ ರೂಪಾಯಿಗಳ ಆರ್ಥಿಕ ನೆರವು ನೀಡಲು ನಿರ್ಧರಿಸಲಾಗಿದೆ" ಎಂದು ಗೃಹ ಖಾತೆಯನ್ನೂ ಹೊಂದಿರುವ ಸಹಾ ಹೇಳಿದರು.

ತ್ರಿಪುರ ಚಕ್ಮಾ ವಿದ್ಯಾರ್ಥಿ ಸಂಘ ಮತ್ತು ಮೋಗ್ ವಿದ್ಯಾರ್ಥಿಗಳ ಕಲ್ಯಾಣ ಸಂಘದ ನಾಲ್ವರು ಸದಸ್ಯರ ನಿಯೋಗವು ಸಹಾ ಅವರನ್ನು ಭೇಟಿ ಮಾಡಿ ಬಲಿಪಶುವಿನ ಕುಟುಂಬದ ಸದಸ್ಯರಿಗೆ ಸರ್ಕಾರಿ ಉದ್ಯೋಗ, ತ್ವರಿತ ನ್ಯಾಯಕ್ಕಾಗಿ ಉತ್ತರಾಖಂಡ ಸರ್ಕಾರದೊಂದಿಗೆ ಮಧ್ಯಪ್ರವೇಶ ಮತ್ತು ಉತ್ತರಾಖಂಡ ಸರ್ಕಾರದಿಂದ ಸಾಕಷ್ಟು ಪರಿಹಾರವನ್ನು ಕೋರಿದೆ.

ಅಖಿಲ ಭಾರತ ಚಕ್ಮಾ ವಿದ್ಯಾರ್ಥಿ ಒಕ್ಕೂಟದ (ಎಐಎಸ್‌ಯುಸಿ) ಅಧ್ಯಕ್ಷ ದೃಶ್ಯಮುನಿ ಚಕ್ಮಾ, ಪ್ರಕರಣದಲ್ಲಿ ಪೊಲೀಸರು ಮತ್ತು ತನಿಖಾ ಸಂಸ್ಥೆಗಳ ನಡವಳಿಕೆಯ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ. ಆರಂಭದಲ್ಲಿ ಪೊಲೀಸರು ಎಫ್‌ಐಆರ್ ದಾಖಲಿಸಲು ವಿಫಲರಾಗುವ ಮೂಲಕ ಅಪರಾಧದ ಗುರುತ್ವವನ್ನು ದುರ್ಬಲಗೊಳಿಸಲು ಪ್ರಯತ್ನಿಸಿದರು ಎಂದು ಅವರ ಒಕ್ಕೂಟ ಹೇಳಿದೆ. ಘಟನೆ ಡಿಸೆಂಬರ್ 9 ರಂದು ನಡೆದಿದ್ದರೂ, ಎಫ್‌ಐಆರ್ ಡಿಸೆಂಬರ್ 12 ರಂದು ಮಾತ್ರ ದಾಖಲಾಗಿದೆ. ಅಂತಿಮವಾಗಿ ಎಫ್‌ಐಆರ್ ದಾಖಲಾಗುವ ಹೊತ್ತಿಗೆ, ಪ್ರಮುಖ ಆರೋಪಿಗಳಲ್ಲಿ ಒಬ್ಬ ನಾಪತ್ತೆಯಾಗಿದ್ದ .ಆತ ಇನ್ನೂ ಪತ್ತೆಯಾಗಿಲ್ಲ, ಇದು ಪೊಲೀಸ್ ಕ್ರಮದಲ್ಲಿನ ಗಂಭೀರ ನ್ಯೂನತೆಗಳನ್ನು ತೋರಿಸುತ್ತದೆ.

# ಬಸವೇಶ್ವರ ಪ್ರೌಢಶಾಲೆಯಲ್ಲಿ ಸ್ನೇಹ ಸಮ್ಮಿಲನ




**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸಿದ್ದಲಿಂಗ ನಗರದ ಬಸವೇಶ್ವರ ಪ್ರೌಢಶಾಲೆಯಲ್ಲಿ 2014-15ನೇ ಸಾಲಿನ ವಿದ್ಯಾರ್ಥಿಗಳಿಂದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಬಿ. ಗೌಡರ ವಹಿಸಿಕೊಂಡಿದ್ದರು. ಎಮ್.ಎಮ್. ಪಿಯು ಕಾಲೇಜು ಉಪನ್ಯಾಸಕ ಎಸ್.ಬಿ. ಹಿರೇಮಠ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಈ ವೇಳೆ ಮುಖ್ಯೋಪಾಧ್ಯಾಯ ಕೆ.ವಿ. ಕೋರಡ್ಡಿ, ಅಲಿ ಪಬ್ಲಿಕ್ ಶಾಲೆಯ ಮುಖ್ಯೋಪಾಧ್ಯಾಯರಾದ ಖಾಲಿದಾ ಸಬೀನ್ ಎಸ್.ಗುಳೇದಗುಡ್ಡ ಉಪಸ್ಥಿತರಿದ್ದರು. ಮುಖ್ಯ ಅತಿಥಿಗಳಾಗಿ ಬಿ.ಕೆ. ನಿಂಬನಗೌಡರ, ಎಚ್.ಎಸ್. ಕರಕಣ್ಣವರ, ಬಿ.ಬಿ. ಸಂಕನೂರ, ಸಿ.ಎಸ್. ಮಾನ್ವಿ, ಎಂ.ಎಸ್. ರಾಮಣ್ಣವರ, ಬಿ.ಬಿ. ಇಬ್ರಾಹಿಂಪೂರ, ಎಸ್.ಎಚ್. ಭಜಂತ್ರಿ, ಆರ್.ಕೆ. ಶಿವನಗೌಡರ, ಆರ್.ಆಯ್. ಆದ್ವಾನಿ, ಬಿ.ಎಸ್. ಬೇವಿನಮರದ ಮುಂತಾದವರು ಭಾಗವಹಿಸಿದ್ದರು.

# ತಮಿಳುನಾಡು| ವಿಶ್ವವಿದ್ಯಾಲಯ ತಿದ್ದುಪಡಿ ಮಸೂದೆ ವಾಪಾಸ್; ಸರಕಾರಕ್ಕೆ ಹಿನ್ನಡೆ



**■ ವಿಜಯಸಾಕ್ಷಿ ಸುದ್ದಿ, ಚೆನ್ನೈ**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮಿಳುನಾಡು ವಿಶ್ವವಿದ್ಯಾಲಯದ ಮದ್ರಾಸ್ ತಿದ್ದುಪಡಿ ಮಸೂದೆಯನ್ನು ಹಿಂದಿರುಗಿಸಿದ್ದಾರೆ, ಇದು ರಾಜ್ಯ ಸರ್ಕಾರಕ್ಕೆ ತನ್ನ ಉಪಕುಲಪತಿಯನ್ನು ನೇಮಿಸಲು ಅಧಿಕಾರ ನೀಡುತ್ತದೆ ಎಂದು ಅಧಿಕೃತ ಮೂಲಗಳು ಮಂಗಳವಾರ ತಿಳಿಸಿವೆ.

ಏಪ್ರಿಲ್ 2022 ರಲ್ಲಿ ಮಸೂದೆಯನ್ನು ಅಂಗೀಕರಿಸಿದ ತಮಿಳುನಾಡು ವಿಧಾನಸಭೆಯು, ಎರಡು ವರ್ಷಗಳಿಗೂ ಹೆಚ್ಚು ಕಾಲ ಉಪಕುಲಪತಿ ಇಲ್ಲದೆ ವ್ಯವಹಾರಗಳನ್ನು ನಿರ್ವಹಿಸುತ್ತಿದ್ದ 168 ವರ್ಷಗಳಷ್ಟು ಹಳೆಯದಾದ ವಿಶ್ವವಿದ್ಯಾನಿಲಯವನ್ನು ತನ್ನ ಹಿಡಿತ-ಕ್ಕೆ ತೆಗೆದುಕೊಳ್ಳುವ ಗುರಿಯನ್ನು ಹೊಂದಿದ್ದು, ರಾಷ್ಟ್ರಪತಿಗಳ ಅನುಮೋದನೆಗಾಗಿ ಅದನ್ನು ಕಳುಹಿಸಿತ್ತು.

ಮದ್ರಾಸ್ ವಿಶ್ವವಿದ್ಯಾಲಯ ಕಾಯ್ದೆಗೆ ತಿದ್ದುಪಡಿ ತರುವ ಮಸೂದೆಯು, ಈಗ ವಿಶ್ವವಿದ್ಯಾಲಯದ ಪದನಿಮಿತ್ತ ಕುಲಪತಿಯಾಗಿ ಸೇವೆ ಸಲ್ಲಿಸುತ್ತಿರುವ ರಾಜ್ಯಪಾಲರಿಂದ ಕುಲಪತಿಯನ್ನು ನೇಮಿಸುವ ಮತ್ತು ತೆಗೆದುಹಾಕುವ ಅಧಿಕಾರವನ್ನು ರಾಜ್ಯ ಸರ್ಕಾರಕ್ಕೆ ವರ್ಗಾಯಿಸುವ ಮೂಲಕ, ಕಾಯಿದೆಯಲ್ಲಿ "ಕುಲಪತಿ" ಎಂಬ ಪದವನ್ನು "ಸರ್ಕಾರ" ಎಂದು ಬದಲಾಯಿಸುವ ಮೂಲಕ ಪ್ರಯತ್ನಿಸಿತು.

ರಾಷ್ಟ್ರಪತಿಗಳು ಇತ್ತೀಚೆಗೆ ಮಸೂದೆಯನ್ನು ಪುನರ್ವಿಮರ್ಶೆಗಾಗಿ ವಿಧಾನಸಭೆಗೆ ಹಿಂದಿರುಗಿಸಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಈ ಹಿಂದೆ, ರಾಜ್ಯಪಾಲ ಆರ್. ಎನ್. ರವಿ ಅವರು ಮಸೂದೆಯನ್ನು ರಾಷ್ಟ್ರಪತಿಗಳ ಪರಿಗಣನೆಗೆ ಕಾಯ್ದಿರಿಸಿದ್ದರು. ಪ್ರಸ್ತಾವಿತ ಕ್ರಮವು ವಿಶ್ವವಿದ್ಯಾಲಯ ಅನುದಾನ ಆಯೋಗದ (ಯುಜಿಸಿ) ನಿಯಂತ್ರಣ ಮತ್ತು ವಿಸಿ ನೇಮಕಾತಿಗಳನ್ನು ನಿಯಂತ್ರಿಸುವ ಸ್ಥಾಪಿತ ಮಾನದಂಡಗಳಿಗೆ ವಿರುದ್ಧವಾಗಿರುತ್ತದೆ ಎಂಬ ಕಳವಳವನ್ನು ಅವರು ಉಲ್ಲೇಖಿಸಿದ್ದರು.

ಅದು ಮರಳಿ ಬಂದ ನಂತರ, ಸಭೆಯು ಪ್ರಸ್ತಾವಿತ ಶಾಸನವನ್ನು ಮರುಪರಿಶೀಲಿಸಬೇಕು ಎಂದು ಅಧಿಕಾರಿ ಹೇಳಿದರು.

ಮದ್ರಾಸ್ ವಿಶ್ವವಿದ್ಯಾಲಯ ಸೇರಿದಂತೆ 22 ವಿಶ್ವವಿದ್ಯಾಲಯಗಳಲ್ಲಿ ಸುಮಾರು 14 ವಿಶ್ವವಿದ್ಯಾಲಯಗಳು ನಿಯಮಿತ ವಿಸಿಗಳ ಅನುಪಸ್ಥಿತಿಯಲ್ಲಿ ಸಂಚಾಲಕ ಸಮಿತಿಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿವೆ.

### ನೆತನ್ಯಾಹು ಭೇಟಿಯ ಸಂದರ್ಭದಲ್ಲಿ ತಮ್ಮ ಶಾಂತಿಪ್ರಿಯ ಹೇಳಿಕೆ ಪುನರಾವರ್ತಿಸಿದ ಟ್ರಂಪ್

# ಭಾರತ-ಪಾಕಿಸ್ತಾನ ಯುದ್ಧ ನಿಂತಿತು!

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ವಿಶ್ವ ನಾಯಕರೊಂದಿಗಿನ ಸಭೆಗಳ ಸಮಯದಲ್ಲಿ ಪರಮಾಣು ಶಸ್ತ್ರಸಜ್ಜಿತ ದಕ್ಷಿಣ ಏಷ್ಯಾದ ನೆರೆಹೊರೆಯವರ ನಡುವಿನ ಸಂಘರ್ಷವನ್ನು ಕೊನೆಗೊಳಿಸಿದ ಕೀರ್ತಿಯನ್ನು ಅಮೆರಿಕ ಅಧ್ಯಕ್ಷರು ಪಡೆದುಕೊಂಡಿದ್ದಾರೆ ಮತ್ತು ತಮ್ಮ ವಿದೇಶ ಪ್ರವಾಸಗಳ ಸಮಯದಲ್ಲಿ ಅದೇ ಹೇಳಿಕೆಯನ್ನು ಪುನರಾವರ್ತಿಸಿದ್ದಾರೆ.

ಭಾರತಕ್ಕೆ ಭೇಟಿ ನೀಡಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗಿನ ದ್ವಿಪಕ್ಷೀಯ ಭೇಟಿಯ ಸಂದರ್ಭದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತ-ಪಾಕಿಸ್ತಾನ ಸಂಘರ್ಷವನ್ನು ಪರಿಹರಿಸುವ ತಮ್ಮ ಹೇಳಿಕೆಯನ್ನು ಮತ್ತೊಮ್ಮೆ ಪುನರುಚ್ಚರಿಸಿದ್ದಾರೆ.

ಫ್ಲೋರಿಡಾದ ಪಾಮ್ ಬೀಚ್‌ನಲ್ಲಿರುವ ಮಾರ್-ಎ-ಲಾಗೊದಲ್ಲಿ ನೆತನ್ಯಾಹು ಮತ್ತು ಅವರ ನಿಯೋಗದೊಂದಿಗೆ ಸೋಮವಾರ ದ್ವಿಪಕ್ಷೀಯ ಸಭೆಯನ್ನು ಆರಂಭಿಸಿದ ಟ್ರಂಪ್, ಶ್ವೇತಭವನದಲ್ಲಿ ತಮ್ಮ ಎರಡನೇ ಅವಧಿಯ ಮೊದಲ ವರ್ಷದಲ್ಲಿ ಎಂಟು ಯುದ್ಧಗಳನ್ನು



ಪರಿಹರಿಸಿದ್ದೇನೆ ಆದರೆ ಅದಕ್ಕೆ ಎಂದಿಗೂ ಕ್ರೆಡಿಟ್ ಸಿಗುವುದಿಲ್ಲ ಎಂದು ಹೇಳಿದರು.

ಅರ್ಮೇನಿಯಾ ಮತ್ತು ಅಜೆರ್ಬೈಜಾನ್ ನಡುವಿನ ಯುದ್ಧದ ಬಗ್ಗೆ ಮಾತನಾಡಿದ ಟ್ರಂಪ್, ಆ ದೇಶಗಳಿಗೆ ಸುಂಕ ವಿಧಿಸುವುದರ ಜೊತೆಗೆ ಇತರ ಸಂಘರ್ಷಗಳ ಬೆದರಿಕೆ ಹಾಕಿದ್ದರು, ಆದರೆ ಅದಕ್ಕೆ ಅವರಿಗೆ ಮನ್ನಣೆ ನೀಡಲಾಗುವುದಿಲ್ಲ ಎಂದು ಹೇಳಿದರು. ನಂತರ ಅವರು ಭಾರತ ಮತ್ತು ಪಾಕಿಸ್ತಾನ ನಡುವಿನ ಹೋರಾಟವನ್ನು ನಿಲ್ಲಿಸಿದೆ ಎಂಬ ತಮ್ಮ ಹೇಳಿಕೆಯನ್ನು ಪುನರಾವರ್ತಿಸಿದರು.

"ಎಂಟು ಯುದ್ಧಗಳನ್ನು ಇತ್ಯರ್ಥಪಡಿಸಿದೆ, ಆದರೆ ನಮಗೆ ದೇಶಗಳು ತಿಳಿದಿಲ್ಲ. ಅಜೆರ್ಬೈಜಾನ್ ನೀವು ಅದನ್ನು ಹೇಳಿದಾಗ ಅದು ಒಳ್ಳೆಯದು ಮತ್ತು (ರಷ್ಯಾದ ಅಧ್ಯಕ್ಷ ವ್ಲಾಡಿಮಿರ್) ಪುಟಿನ್ ವಾಸ್ತವವಾಗಿ ನನಗೆ ಹೇಳಿದರು, 'ನಾನು 10 ವರ್ಷಗಳಿಂದ ಪ್ರಯತ್ನಿಸುತ್ತಿರುವುದರಿಂದ ನೀವು ಆ ಯುದ್ಧವನ್ನು ಇತ್ಯರ್ಥಪಡಿಸಿದ್ದೀರಿ ಎಂದು ನನಗೆ ನಂಬಲು ಸಾಧ್ಯವಿಲ್ಲ'. ಮತ್ತು ನಾನು ಅಕ್ಷರಶಃ ಒಂದೇ ದಿನದಲ್ಲಿ ಅದನ್ನು ಇತ್ಯರ್ಥಪಡಿಸಿದೆ," ಎಂದು ಟ್ರಂಪ್ ಹೇಳಿದರು.

"ವ್ಯಾಪಾರ. ಅವರು ವ್ಯಾಪಾರ ಮಾಡುತ್ತಾರೆ. ನಾನು ಹೇಳಿದೆ, 'ನಾವು ನಿಮ್ಮ ವ್ಯಾಪಾರವನ್ನು ಕಡಿತಗೊಳಿಸುತ್ತೇವೆ. ಇನ್ನು ವ್ಯಾಪಾರವಿಲ್ಲ. ಅವರಿಬ್ಬರಿಗೂ ನಂತರ ನಾನು ಶೇಕಡಾ 200 ರಷ್ಟು ಸುಂಕವನ್ನು ಹಾಕಿದೆ ಮರುದಿನ ಅವರು ಕರೆ ಮಾಡಿದರು 35 ವರ್ಷಗಳ ಹೋರಾಟ, ಮತ್ತು ಅವರು ನಿಲ್ಲಿಸಿದರು." "ಇದಕ್ಕೆ ನನಗೆ ಕ್ರೆಡಿಟ್ ಸಿಗುತ್ತದೆಯೇ? ಇಲ್ಲ. ನಾನು ಅವುಗಳಲ್ಲಿ ಎಂಟು ಮಾಡಿದೆ. ಭಾರತ ಮತ್ತು ಪಾಕಿಸ್ತಾನದ ಬಗ್ಗೆ ಏನು ಹಾಗಾದರೆ ನಾನು ಅವುಗಳಲ್ಲಿ ಎಂಟು ಮಾಡಿದೆ, ಮತ್ತು ನಂತರ ನಾನು ನಿಮಗೆ ಉಳಿದದ್ದನ್ನು ಹೇಳುತ್ತೇನೆ" ಎಂದು ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ, ಯುದ್ಧ ಕಾರ್ಯದರ್ಶಿ ಪೀಟ್ ಹೆಗ್ಸೆತ್, ಅವರ ಅಳಿಯ ಜೇರೆಡ್ ಕುಶ್ನರ್ ಮತ್ತು ಹಿರಿಯ ಆಡಳಿತ ಅಧಿಕಾರಿಗಳು ಪಕ್ಕದಲ್ಲಿದ್ದಾಗ ಟ್ರಂಪ್, ತಮ್ಮ ದ್ವಿಪಕ್ಷೀಯ ಸಭೆಗೆ ಮುಂಚಿತವಾಗಿ ನೆತನ್ಯಾಹುಗೆ ತಿಳಿಸಿದರು.

ಮೇ 10 ರಂದು, ವಾಷಿಂಗ್ಟನ್ ಮಧ್ಯಸ್ಥಿಕೆಯಲ್ಲಿ "ದೀರ್ಘ ರಾತ್ರಿ" ಮಾತುಕತೆಯ ನಂತರ ಭಾರತ ಮತ್ತು ಪಾಕಿಸ್ತಾನ "ಪೂರ್ಣ ಮತ್ತು ತಕ್ಷಣದ" ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಟ್ರಂಪ್ ಸಾಮಾಜಿಕ ಮಾಧ್ಯಮದಲ್ಲಿ ಘೋಷಿಸಿದಾಗಿನಿಂದ, ಅವರು ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷವನ್ನು ಕೊನೆಗೊಳಿಸಿದ್ದೇನೆ ಎಂದು 70 ಕ್ಕೂ ಹೆಚ್ಚು ಬಾರಿ ತಮ್ಮ ಹೇಳಿಕೆಯನ್ನು ಪುನರಾವರ್ತಿಸಿದ್ದಾರೆ. ವಿಶ್ವ ನಾಯಕರೊಂದಿಗಿನ ಸಭೆಗಳ ಸಮಯದಲ್ಲಿ ಪರಮಾಣು ಶಸ್ತ್ರಸಜ್ಜಿತ ದಕ್ಷಿಣ ಏಷ್ಯಾದ ನೆರೆಹೊರೆಯವರ ನಡುವಿನ ಸಂಘರ್ಷವನ್ನು ಕೊನೆಗೊಳಿಸಿದ ಕೀರ್ತಿಯನ್ನು ಅವರು ಪಡೆದುಕೊಂಡಿದ್ದಾರೆ ಮತ್ತು ವಿದೇಶ ಪ್ರವಾಸಗಳ ಸಮಯದಲ್ಲಿ ಅದೇ ಹೇಳಿಕೆಯನ್ನು ಪುನರಾವರ್ತಿಸಿದ್ದಾರೆ.

ಭಾರತವು ಯಾವುದೇ ಮೂರನೇ ವ್ಯಕ್ತಿಯ ಹಸ್ತಕ್ಷೇಪವನ್ನು ನಿರಂತರವಾಗಿ ನಿರಾಕರಿಸುತ್ತಾ ಬಂದಿದೆ. ಏಪ್ರಿಲ್ 22 ರಂದು ನಡೆದ ಪಹಲ್ಗಾಮ್ ದಾಳಿಯಲ್ಲಿ 26 ನಾಗರಿಕರು ಸಾವನ್ನಪ್ಪಿದ್ದಕ್ಕೆ ಪ್ರತೀಕಾರವಾಗಿ ಭಾರತವು ಮೇ 7 ರಂದು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು.

# ಡಾ. ದತ್ತಾತ್ರೇಯ ವೈಕುಂಠೆಗೆ ಸನ್ಮಾನ

▶▶ ಮೊದಲನೇ ಪುಟದಿಂದ

ಸಹ ಶಿಬಿರ ನಡೆಸಿ 120ಕ್ಕೂ ಹೆಚ್ಚು ಜನರಿಗೆ ಉಚಿತ ರಕ್ತ ತಪಾಸಣೆ, ರಕ್ತಗುಂಪು ಪರೀಕ್ಷೆ ನಡೆಸಿದ್ದು 2026ರಲ್ಲಿ ಸಿಕಂದರಾಬಾದ್‌ದಲ್ಲಿ ನಡೆಯಲಿರುವ ಸಮ್ಮೇಳನದಲ್ಲೂ ಸಹ ಈ ರೀತಿಯ ವಿಶೇಷ ಶಿಬಿರ ಜರುಗಿಸಲು ಏರ್ಪಾಡು ಮಾಡುವದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ವಿಜಯಲಕ್ಷ್ಮೀ ತ್ರಿಮಲ್ಲೆ ಅವರನ್ನೂ ಗೌರವಿಸಲಾಯಿತು. ವ್ಹಿಜನ್‌ನ ರಾಷ್ಟ್ರೀಯ ಅಧ್ಯಕ್ಷ ಜೆ.ಆರ್. ಬಾಲಕೃಷ್ಣ, ಕಾರ್ಯದರ್ಶಿ ಯೋಗೇಶ ಸಾಕರೆ, ಚೇರಮನ್ ಗಜೇಂದ್ರನಾಥ ಮಾಳೋದೆ ಮುಂತಾದವರಿದ್ದರು.

# ಅಧಿಕಾರಿಗಳು ಎಚ್ಚರದಿಂದ ಕಾರ್ಯ ನಿರ್ವಹಿಸಿ

▶▶ ಮೊದಲನೇ ಪುಟದಿಂದ

ಮಾಹಿತಿ ತಮಗೆ ಗೊತ್ತೇ ಇಲ್ಲದಿದ್ದರೆ ಸಭೆ ಹೇಗೆ ನಡೆಸಲು ಸಾಧ್ಯ? ಇದು ಒಳ್ಳೆಯ ಬೆಳವಣಿಗೆಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಾಮಾನ್ಯ ಸಭೆಯಲ್ಲಿ ನಿಮ್ಮ ಇಲಾಖೆಗಳಲ್ಲಿ ಏನು ಕಾಮಗಾರಿಗಳು ಆಗಬೇಕು ಎನ್ನುವ ಬಗ್ಗೆ ಹಾಗೂ ಎಲ್ಲ ಬೇಕು-ಬೇಡಿಕೆಗಳ ಬಗ್ಗೆ ಕೂಲಂಕಷವಾಗಿ ವಿಸ್ತೃತ ಚರ್ಚೆ ಮಾಡಿ ಕ್ರಿಯಾಯೋಜನೆ ಸಿದ್ಧಪಡಿಸಿಕೊಡುವಂತೆ ಅಧಿಕಾರಿಗಳಿಗೆ ತಿಳಿಸಲಾಗುತ್ತಿದೆ. ನೀವು ನೀಡಿದ ಕ್ರಿಯಾ ಯೋಜನೆಯನ್ನೇ ಮತ್ತೆ ಮತ್ತೆ ಬದಲಾಯಿಸುತ್ತಿರುವುದು ನಿಮ್ಮಲ್ಲಿ ಸ್ಪಷ್ಟತೆ ಇಲ್ಲವೇ ಎಂಬ ಪ್ರಶ್ನೆ ಮೂಡಿಸುತ್ತದೆ. ನೀವು ತಯಾರಿಸಿ ಅನುಮೋದನೆಗೆ ಸಲ್ಲಿಸಿದ ಕ್ರಿಯಾಯೋಜನೆ ಬಗ್ಗೆ ಆಯಾ ಇಲಾಖೆ ಅಧಿಕಾರಿಗಳೇ ಪ್ರಸ್ತಾವನೆ ಮಾಡಬೇಕು ಎಂದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

**'ಉನ್ನತಿ' ತರಬೇತಿ ಶಿಬಿರಕ್ಕೆ ಚಾಲನೆ ನೀಡಿದ ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ**

# 'ಉನ್ನತಿ' ಗ್ರಾಮೀಣ ಜನರ ಆಶಾಕಿರಣ

■ ವಿಜಯಸಾಕ್ಷಿ ಸುದ್ದಿ, ಗದಗ




ಗ್ರಾಮೀಣ ಜನರ ಕೌಶಲ್ಯ ಗುರುತಿಸಿ, ಜೀವನೋಪಾಯಕ್ಕೆ ಅಗತ್ಯವಾದ ತರಬೇತಿ ನೀಡಲು ಉನ್ನತಿ ಯೋಜನೆ ಮಹತ್ತರ ಕಾರ್ಯಕ್ರಮವಾಗಿದೆ ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.

ತಾಲೂಕಿನ ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ ಹಾಗೂ ಎಸ್‌ಬಿಐ- ಎಎಸ್‌ಎಫ್-ಆರ್ ಸೆಟಿ ಹುಲಕೋಟಿ ಇವುಗಳ ಸಹಯೋಗದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಲ್ಲಿ 60 ದಿನಗಳಿಗೂ ಹೆಚ್ಚು ಅಕೌಶಲ ದಿನಗಳನ್ನು ಪೂರೈಸಿದವರಿಗಾಗಿ ಹಮ್ಮಿಕೊಂಡ 30 ದಿನಗಳ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಜಿ.ಪಂ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ ಮಾತನಾಡಿ, ಉನ್ನತಿ ಯೋಜನೆಯು ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಕಾರ್ಮಿಕರ ಕೌಶಲ್ಯದ ನೆಲೆಯನ್ನು ನವೀಕರಿಸಿ, ಅವರ ಜೀವನೋಪಾಯ ಸುಧಾರಿಸುವ ಮಹತ್ತರ ಕಾರ್ಯ ಈ ತರಬೇತಿಯ ಆಶಯವಾಗಿದೆ ಎಂದರು.

ಲೀಡ್ ಬ್ಯಾಂಕ್ ಜಿಲ್ಲಾ ಮ್ಯಾನೇಜರ್ ಸಂತೋಷ ಎಂ.ವಿ ಮಾತನಾಡಿ, ಅಂಕ ಪಟ್ಟಿಯನ್ನು ನೋಡಿ ಉದ್ಯೋಗ ನೀಡುವ ಕಾಲ ಇದಲ್ಲ. ಇಂದಿನ ಆಧುನಿಕ ಕಾಲದಲ್ಲಿ ಯಾವುದೇ ಕೆಲಸ ಸಣ್ಣದು ಸಹ ಅಲ್ಲ. ಮಾಡುವ ಕೆಲಸದಲ್ಲಿ ನೈಪುಣ್ಯತೆ ಇದ್ದು, ಅದರಲ್ಲಿ ಉತ್ತಮ ಕೌಶಲ್ಯವಂತರಾಗಿದ್ದರೆ ಕೆಲಸ ನೀಡಲು ಅನೇಕ ಸಂಘ-ಸಂಸ್ಥೆಗಳು ಮುಂದೆ ಬರುತ್ತವೆ.

> ಜೀವನದಲ್ಲಿ ಆರ್ಥಿಕ ಮತ್ತು ಸಾಮಾಜಿಕವಾಗಿ ಮುಂದೆ ಬರಲು ಜ್ಞಾನ ಮತ್ತು ಕೌಶಲ್ಯ ವೃದ್ಧಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಗ್ರಾಮೀಣಾಭಿವೃದ್ಧಿ ಪಂಚಾಯತ ರಾಜ್ ಇಲಾಖೆ ಉಚಿತ ಊಟ, ವಸತಿ ಹಾಗೂ ಸಹಾಯಧನ ನೀಡುವ ಮೂಲಕ ಕೌಶಲ್ಯ ಮತ್ತು ಜ್ಞಾನ ಹೆಚ್ಚಿಸಲು ಉನ್ನತಿ ತರಬೇತಿ ಕಾರ್ಯಕ್ರಮ ರೂಪಿಸಿರುವುದು ಗ್ರಾಮೀಣ ಜನರಿಗೆ ಆಶಾಕಿರಣವಾಗಿದೆ ಎಂದು ಸಿ.ಆರ್. ಮುಂಡರಗಿ ಅಭಿಪ್ರಾಯಪಟ್ಟರು.

ಕೌಶಲ್ಯ ಉಳ್ಳವರಿಗೆ ಆರ್ಥಿಕವಾಗಿ ಸಹಾಯ ಮಾಡಲು ಬ್ಯಾಂಕ್‌ಗಳು ಸನ್ನದ್ಧವಾಗಿವೆ. ದೇಶದ ಪ್ರಗತಿಗೆ ಕೌಶಲ್ಯ ಹೊಂದಿದ ಯುವ ಜನರ ಅಗತ್ಯವಿದೆ.

ಸರ್ಕಾರದ ಹಲವು ತರಬೇತಿ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಕೌಶಲ್ಯ ಪಡೆದು ಉತ್ತಮ ಸಾಧನೆ ಮಾಡಿದ ಹಲವು ಜನರು ಉದ್ಯಮ ಆರಂಭಿಸಿ ಯಶಸ್ಸು ಸಾಧಿಸಿ, ನೂರಾರು ಜನರಿಗೆ ಉದ್ಯೋಗ ನೀಡಿ ನೌಕರರ ಆರ್ಥಿಕ ಸ್ಥಿತಿ ವೃದ್ಧಿಸಿದ್ದಾರೆ ಎಂದು ತಿಳಿಸಿದರು.

ಸಹಾಯಕ ಜಿಲ್ಲಾ ಕಾರ್ಯಕ್ರಮ ಸಮನ್ವಯ ಅಧಿಕಾರಿ ಕಿರಣ ಕುಮಾರ ಎಸ್.ಎಚ್ ಮತ್ತು ಎನ್‌ಆರ್‌ಎಲ್‌ಎಂ ಕಾರ್ಯಕ್ರಮ ವ್ಯವಸ್ಥಾಪಕ ರಘುನಾಥಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ವೀರೇಶ ಬಸನಗೌಡ್ರ, ಅನಿಲಕುಮಾರ ಕೆ, ಸಹನಾ ಕೋಟೆಕಲ್ಲ, ಮಲ್ಲಮ್ಮ ರಡ್ಡೆರ, ರೇಣುಕಾ ಪಲ್ಲೆದ, ನೀಲಾ ಸಂಗನಾಳ ಇತರರಿದ್ದರು. ಹುಲಕೋಟಿ ಆರ್-ಸೆಟಿ ತರಬೇತುದಾರ ನವೀನ ಹಿರೇಗೌಡ್ರ ನಿರೂಪಿಸಿ, ವಂದಿಸಿದರು.

**ಸಮಗ್ರ ರೈತ ಹೋರಾಟ ಸಮಿತಿ ವತಿಯಿಂದ ರೈತರ ಚಿಂತನ-ಮಂಥನ ಸಭೆ**

# ಸರ್ಕಾರದ ರೈತಪರ ಕಾಳಜಿಗೆ ಅಭಿನಂದನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಲಕ್ಷ್ಮೇಶ್ವರ, ಶಿರಹಟ್ಟಿ, ಮುಂಡರಗಿ ಸಮಗ್ರ ರೈತ ಹೋರಾಟ ಸಮಿತಿ ವತಿಯಿಂದ ರೈತರ ಚಿಂತನ-ಮಂಥನ ಸಭೆ ಇತ್ತೀಚೆಗೆ ಜರುಗಿತು.

ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ಮಾತನಾಡಿ, ಸಮಗ್ರ ರೈತ ಹೋರಾಟ ಸಮಿತಿ ನೇತೃತ್ವದಲ್ಲಿ ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯುವಂತೆ ಆಗ್ರಹಿಸಿ ಲಕ್ಷ್ಮೇಶ್ವರದ ಶಿಗ್ಲಿ ನಾಕಾದಲ್ಲಿ 18 ದಿನಗಳ ಕಾಲ ನಡೆದ ಅಹೋರಾತ್ರಿ ಅನಿರ್ದಿಷ್ಟಾವಧಿ ಹೋರಾಟಕ್ಕೆ ರಾಜ್ಯ ಸರ್ಕಾರ ಮಣಿದು, ರೈತರ ವೇದಿಕೆಯಿಂದಲೇ ಮೆಕ್ಕೆಜೋಳ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿದೆ. ಇದು ರೈತರ ಗೆಲುವಾಗಿದ್ದು, ಜಿಲ್ಲಾಡಳಿತ ಮತ್ತು ಸರ್ಕಾರದ ರೈತಪರ ಕಾಳಜಿಗೆ ಅಭಿನಂದನೆ ಸಲ್ಲಿಸಬೇಕು ಎಂದರು.

ಈ ಹೋರಾಟಕ್ಕೆ ಪಟ್ಟಣದ ಜನತೆ ಬೆಂಬಲ ನೀಡಿ ಹೋರಾಟ ಯಶಸ್ವಿಯಾಗಲು ಕಾರಣರಾಗಿದ್ದಾರೆ. ಅಲ್ಲದೆ, ನಾಡಿನ ಮಠಾಧೀಶರು ಹಾಗೂ ಅನೇಕ ರಾಜಕೀಯ ಮುಖಂಡರು ಹೋರಾಟದಲ್ಲಿ ಭಾಗವಹಿಸಿ ಬೆಂಬಲ ನೀಡಿದ ಪರಿಣಾಮ ಹೋರಾಟ ಯಶಸ್ವಿಯಾಯಿತು. ಈ ಹೋರಾಟಕ್ಕೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಬೆಂಬಲ ನೀಡಿದ ಎಲ್ಲರಿಗೂ ಸಮಗ್ರ ರೈತ ಹೋರಾಟ ಸಮಿತಿ ವತಿಯಿಂದ ಧನ್ಯವಾದ ತಿಳಿಸಿದರು.

> ರೈತ ಹೋರಾಟಗಾರ ಮಂಜುನಾಥ ಮಾಗಡಿ ಮಾತನಾಡಿ, ಮೆಕ್ಕೆಜೋಳ ಖರೀದಿ ಕೇಂದ್ರವನ್ನು ನೆಪ ಮಾತ್ರಕ್ಕೆ ತೆರೆಯಲಾಗಿದೆ ಎಂಬಂತೆ ಕಾಣುತ್ತಿದ್ದು, ಅದರ ನಿಜವಾದ ಪ್ರಯೋಜನ ರೈತರಿಗೆ ದೊರೆಯುತ್ತಿಲ್ಲ. ಖರೀದಿ ಪ್ರಕ್ರಿಯೆ ಅತ್ಯಂತ ಮಂದಗತಿಯಲ್ಲಿ ನಡೆಯುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿ, ಈ ಕುರಿತು ಈಗಾಗಲೇ ಜಿಲ್ಲಾಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಗಿದ್ದು, ಖರೀದಿ ಕೇಂದ್ರದಲ್ಲಿ ಪ್ರಕ್ರಿಯೆ ವಿಳಂಬ ಅಥವಾ ತಾರತಮ್ಯ ಕಂಡುಬಂದರೆ ತಕ್ಷಣವೇ ಗಮನಕ್ಕೆ ತರಲು ಸೂಚನೆ ನೀಡಲಾಗಿದೆ. ಅಧಿಕಾರಿಗಳು ತಪ್ಪು ಮಾಡಿದಲ್ಲಿ ರೈತರು ಧೈರ್ಯವಾಗಿ ಪ್ರಶ್ನಿಸಿ, ಮೇಲಾಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ರೈತಪರ ಹೋರಾಟದ ವೇಳೆ ವೇದಿಕೆಯಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಯಾವುದೇ ರೀತಿಯ ಅಪಮಾನ ಮಾಡಿಲ್ಲ. ಉದ್ದೇಶಪೂರ್ವಕವಾಗಿ ಯಾರೂ ಅಗೌರವ ತೋರಿಸಿಲ್ಲ. ಅಚಾತುರ್ಯದಿಂದ ನಡೆದ ಪ್ರಮಾದಕ್ಕೆ ಸಮಗ್ರ ರೈತಪರ ಹೋರಾಟ ವೇದಿಕೆಯಿಂದ ಕ್ಷಮಾಪಣೆ ಕೇಳುತ್ತೇವೆ ಎಂದು ತಿಳಿಸಿದರು.

ನಾಗರಾಜ ಚಿಂಚಲಿ, ಹೊನ್ನಪ್ಪ ವಡ್ಡರ, ಪೂರ್ಣಾಜಿ ಕರಾಟೆ ಮಾತನಾಡಿರು. ಈ ಸಂದರ್ಭದಲ್ಲಿ ಸೋಮಣ್ಣ ಡಾಣಗಲ್ಲ, ಎಂ.ಎಸ್. ದೊಡ್ಡಗೌಡರ, ಸುರೇಶ ಹಟ್ಟಿ, ಡಿ.ಸಿ. ಮುರಳಿಹಳ್ಳಿ, ಚನ್ನಪ್ಪ ಷಣ್ಮುಖಿ, ಗಂಗಾಧರ ಕರಾಟೆ, ಮಂಜುನಾಥ ಮುಳಗುಂದ, ರಾಜು ಬೆಲ್ಲದ, ಗೂರಪ್ಪ ಮುಳಗುಂದ, ಪ್ರಕಾಶ ಮೇವುಂಡಿ, ಖಾನಸಾಬ ಸೂರಣಗಿ, ಅಜ್ಜು ಕೊಂಚಿಗೇರಿ, ಪವನ ಬಂಕಾಪುರ, ಶಂಕ್ರಣ್ಣ ಬ್ಯಾಡಗಿ, ಮಲ್ಲೇಶ ವಡ್ಡರ ಮುಂತಾದವರಿದ್ದರು.

# ಪತ್ರಕರ್ತರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ 2025-28ನೇ ಸಾಲಿನ ಅವಧಿಗೆ ನಡೆದ ಚುನಾವಣೆಯಲ್ಲಿ ನೂತನ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಶಿವಮೂರ್ತಿ ಹೊಂಬಳಗಟ್ಟಿ, ಉಪಾಧ್ಯಕ್ಷರಾಗಿ ಲಕ್ಷ್ಮಣ ಎಚ್.ದೊಡ್ಡಮನಿ, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನಗೌಡ ಪಾಟೀಲ, ಕಾರ್ಯದರ್ಶಿಯಾಗಿ ವಿಜಯಕುಮಾರ ಸೊರಟೂರ, ಖಜಾಂಚಿಯಾಗಿ ಮಂಜುನಾಥ ಜಾಗಟಗೇರಿ ಆಯ್ಕೆಯಾಗಿದ್ದಾರೆ.





ತಾಲೂಕು ಕಾರ್ಯಕಾರಿಣಿ ಸದಸ್ಯರ ಮೂರು ಸ್ಥಾನಕ್ಕೆ ಕಾಶಿನಾಥ ಬಿಳಿಮಗ್ಗದ, ಸಿ.ಕೆ. ಗಣಪ್ಪನವರ, ಕವಿ ಬಂಕಾಪೂರ ಆಯ್ಕೆಯಾಗಿದ್ದಾರೆ. ಚುನಾವಣಾ ಅಧಿಕಾರಿಯಾಗಿ ಜಿಲ್ಲಾ ಖಜಾಂಚಿ ರಾಮಣ್ಣ ವಗ್ಗಿ, ಸಹಾಯಕ ಚುನಾವಣಾ ಅಧಿಕಾರಿಯಾಗಿ ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯ ವೆಂಕಟೇಶ ಇಮರಾಪೂರ, ಸಂತೋಷ ಕೊಣ್ಣೂರ ಕಾರ್ಯನಿರ್ವಹಿಸಿದರು.



ಗದಗ ಜಿಲ್ಲಾ ಬ್ರಾಹ್ಮಣ ಸಂಘದವರು ಕೊಡಮಾಡಿದ 2026ನೇ ಸಾಲಿನ ಕ್ಯಾಲೆಂಡರ್‌ಗಳನ್ನು ಮುಳಗುಂದ ಬ್ರಾಹ್ಮಣ ಸಂಘದ ವತಿಯಿಂದ ವಿತರಣೆ ಮಾಡಲಾಯಿತು. ಕ್ಯಾಲೆಂಡರ್‌ಗಳನ್ನು ಪಡೆದ ಸದಸ್ಯರು, ಉಪಯುಕ್ತವಾದ ಕ್ಯಾಲೆಂಡರ್ ನೀಡಿದ ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷರು, ಎಲ್ಲಾ ಹಿರಿಯರಿಗೂ ಧನ್ಯವಾದಗಳನ್ನು ಸಲ್ಲಿಸಿದರು.

# ಸನ್ಮಾರ್ಗ ಕಾಲೇಜು ವಿದ್ಯಾರ್ಥಿಗಳ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಹುಬ್ಬಳ್ಳಿಯ ಋ.ಃ.ಒ.ಖ ಮಹಾವಿದ್ಯಾಲಯದಲ್ಲಿ ಜರುಗಿದ 'ಇಂಟರ್ ಕಾಲೇಜ್ ಫೆಸ್ಟ್ ವಿದ್ಯೋತ್ಸವ 2025'ರಲ್ಲಿ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದ ದ್ವಿತೀಯ ವರ್ಷದ ವಾಣಿಜ್ಯ ವಿದ್ಯಾರ್ಥಿನಿಯರು ಸಕ್ರಿಯವಾಗಿ ಭಾಗವಹಿಸಿ, 'ರಿಥಮ್ ಎಕ್ಸ್‌ಪ್ರೆಸ್' ನೃತ್ಯ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿನಿಯರಾದ ಅನಿತಾ ಚೌಧರಿ, ಶ್ರೇಯಾ ಶೆಟ್ಟಿ, ಝಿಕ್ರಾ ಸುಂಕದ, ಜವೇರಿಯಾ ಡಂಬಳ, ನೇಹಾ ಬರದ, ರಿಂಕು ಚೌಧರಿ ಇವರು ದ್ವಿತೀಯ ಸ್ಥಾನ ಪಡೆದಿದ್ದಾರೆ. 'QUIZ, BRAND-O-WAR' ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳಾದ ನೇಮಿಚಂದ ಗಜೇಂದ್ರಗಡ, ಸಾಹಿಲ್ ಜೈನ, ವರುಣ ಜರತ್‌ಖಾನಿ, ಚಿನ್ಮಯ ಅಕ್ಕಿ ಹಾಗೂ ಶ್ರೀನಿವಾಸ ತೆಗ್ಗಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ವಿಜೇತ ವಿದ್ಯಾರ್ಥಿಗಳನ್ನು ಸ್ಟುಡೆಂಟ್ಸ್ ಎಜ್ಯುಕೇಶ್‌ನ ಸೊಸೈಟಿಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ ಮತ್ತು ಸಿಬ್ಬಂದಿಗಳು, ವಿದ್ಯಾರ್ಥಿಗಳು ಹೃತ್ಪೂರ್ವಕವಾಗಿ ಅಭಿನಂದಿಸಿದ್ದಾರೆ. ಪ್ರೊ. ಸಂಗೀತಾ ಬೀಳಗಿ ಹಾಗೂ ಪ್ರೊ. ಎಸ್.ಎಸ್. ವಜ್ರಬಂಡಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದರು.

# ಮಸೂದೆ ಸಂವಿಧಾನಕ್ಕೆ ವಿರುದ್ಧವಾಗಿದೆ

▶▶ ಮೊದಲನೇ ಪುಟದಿಂದ

ಕಿರುಕುಳ ಉಂಟಾಗುತ್ತದೆ. ಜನರ ವಾಕ್ ಸ್ವಾತಂತ್ರ್ಯ ಹಾಗೂ ಧಾರ್ಮಿಕ ಸ್ವಾತಂತ್ರ್ಯಕ್ಕೆ ಪೂರ್ಣ ರಕ್ಷಣೆ ಒದಗಿಸುವುದು ಮತ್ತು ನ್ಯಾಯಾಲಯದ ಮೇಲ್ವಿಚಾರಣೆಯೊಂದಿಗೆ ಮರುಪರಿಶೀಲನೆ ನಡೆಸುವ ಉದ್ದೇಶದಿಂದ ಇದನ್ನು ವಿಧಾನಸಭೆಗೆ ಹಿಂದಿರುಗಿಸಬೇಕು ಎಂದು ಅಗ್ರಹಿಸಿದರು.

ಈ ವೇಳೆ ವಕೀಲರಾದ ಮಲ್ಲೇಶಪ್ಪ ಬಾಡಗಿ, ಎನ್.ಸಿ. ಬೆಲ್ಲದ, ರವಿಕಾಂತ ಅಂಗಡಿ, ಮಂಜುನಾಥ ಮಾಗಡಿ, ಶಂಕರ ಬ್ಯಾಡಗಿ, ಈರಣ್ಣ ಪೂಜಾರ, ಹೊನ್ನಪ್ಪ ವಡ್ಡರ, ಪ್ರವೀಣ ಯರ್ಲಗಟ್ಟಿ, ಅಮಿತ ಗುಡಗೇರಿ, ಬಸವರಾಜ ಮೆಣಸಿನಕಾಯಿ, ದಶರಥ ಕೋಟೆಗೌಡ್ರ, ಯಲ್ಲಪ್ಪ ಶಿರಬಡಗಿ, ಅಭಿಷೇಕ ಉಮಚಗಿ, ಅರುಣ ಕಳ್ಳಿಹಾಳ, ಪ್ರಕಾಶ ಗುತ್ತಲ, ಕೊಟ್ರೇಶ ಅಳವಂಡಿ, ಮಹಾದೇವಪ್ಪ ಕುಂದಗೋಳ, ಕಲ್ಯಾಣಿ ತಟ್ಟಿ, ಶೋಭಾ ಇಟಗಿ, ಬೇಬಿ ರುದ್ರಶೆಟ್ಟಿ ಮುಂತಾದವರು ಇದ್ದರು.

**ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಗುರುವಂದನಾ, ಸ್ನೇಹ ಸಮ್ಮಿಲನ**

# ಸುಜ್ಞಾನದ ಬೆಳಕು ಕೊಟ್ಟವರು ಗುರು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ



ವಿದ್ಯಾರ್ಥಿ ಜೀವನದಲ್ಲಿ ಅಜ್ಞಾನದ ಕತ್ತಲೆ ಕಳೆದು ಸುಜ್ಞಾನದ ಬೆಳಕು ನೀಡಿದವರು ಗುರು. ಅವರನ್ನು ಎಂದೂ ಮರೆಯದಿರಿ ಎಂದು ಮುರುಘಾಮಠ ಧಾರವಾಡ ಹಾಗೂ ಗವಿಮಠ ಮುಳಗುಂದದ ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಶಿಕ್ಷಣ ಸಮೀತಿಯ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದಲ್ಲಿ 2001-02ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಹಮ್ಮಿಕೊಂಡಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ, ಗುರುಗಳನ್ನು ಸನ್ಮಾನಿಸಿ ಮಾತನಾಡಿದರು.

ಪ್ರತಿಯೊಂದು ಕಾರ್ಯಕ್ಕೂ ಗುರು ಬೇಕು. ಅದರಂತೆ ವಿದ್ಯಾರ್ಥಿ ಜೀವನಕ್ಕೆ ಗುರು ತುಂಬಾ ಅವಶ್ಯವಾಗಿದ್ದು, ಗುರುವಿನ ಮಾರ್ಗದಲ್ಲಿ ನಡೆದರೆ ಸನ್ಮಾರ್ಗ ಪ್ರಾಪ್ತಿಯಾಗುವುದರ ಜೊತೆಯಲ್ಲಿ ಸಮಾಜದಲ್ಲಿ ಸನ್ಮಾರ್ಗದ ಹಾದಿಯಲ್ಲಿ ಸಾಗಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಕಲಿಸಿದ ಗುರುಗಳನ್ನು, ಹೆತ್ತ ತಂದೆ-ತಾಯಿಗಳನ್ನು ಎಂದೆಂದಿಗೂ ಮರೆಯಬಾರದು ಎಂದರು.

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಎ. ಬಳಿಗೇರ ಮಾತನಾಡಿ, ಬದುಕಿನುದ್ದಕ್ಕೂ ಗುರು ಅವಶ್ಯಕವಾಗಿದ್ದು, ಗುರಿಯನ್ನು ತಲುಪಲು ಗುರುವಿನ ಕೃಪೆ ಪಡೆದುಕೊಂಡಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿ ಯಶಸ್ಸು ಹೊಂದಲು ಸಾಧ್ಯವಾಗುತ್ತದೆ ಎಂದರು.

> ಅಧ್ಯಕ್ಷತೆ ವಹಿಸಿದ್ದ ಎಂ.ಡಿ. ಬಟ್ಟೂರ ಮಾತನಾಡಿ, ಭಾರತಿಯ ಸಂಸ್ಕೃತಿಯಲ್ಲಿ ಗುರುವಿಗೆ ಅತ್ಯುನ್ನತವಾದ ಸ್ಥಾನ ನೀಡಲಾಗಿದೆ. ಪ್ರತಿಯೊಬ್ಬರಿಗೂ ಗುರುವಿನ ಮಾರ್ಗದರ್ಶನ ಅವಶ್ಯವಾಗಿದೆ. ವಿದ್ಯಾರ್ಥಿ ಜೀವನದಲ್ಲಿ ಗುರುವಿಗೆ ಮಹತ್ವವಾದ ಪಾತ್ರ ವಹಿಸಿರುತ್ತಾರೆ. ಗುರುವಿನ ಮಾರ್ಗದರ್ಶನದಲ್ಲಿ ಸಾಗಿದಾಗ ಬದುಕು ಹಸನಾಗುತ್ತದೆ ಎಂದರು.

ಕಲಿಸಿದ ಗುರುಗಳನ್ನು ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದಿಂದ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾ ಭವನದವರೆಗೂ ವಿಶೇಷವಾಗಿ ಹೂವಿನ ಸುರಿಮಳೆಯೊಂದಿಗೆ ಗೌರವದಿಂದ ಬರಮಾಡಿಕೊಂಡರು. ಕಲಿಸಿದ ಗುರುಗಳನ್ನು ಹಾಗೂ ಸಂಸ್ಥೆಯ ಆಡಳಿತ ಮಂಡಳಿಯವರನ್ನು ಸನ್ಮಾನಿಸಲಾಯಿತು. ಅಗಲಿದ ಗುರುಗಳಿಗೆ, ಹಾಗೂ ವಿದ್ಯಾರ್ಥಿಗಳಿಗೆ ಶ್ರದ್ಧಾಂಜಲಿ ಅರ್ಪಿಸಿ ಮೌನಾಚರಣೆ ಮಾಡಲಾಯಿತು.

ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲದ ನಾಮ ಫಲಕವನ್ನು ಹಾಗೂ ಅಡುಗೆ ಕೋಣೆಗೆ ಫಲಕಗಳನ್ನು ಕೊಡುಗೆಯಾಗಿ ನೀಡಿದರು. ಸಂಸ್ಥೆ ನಡೆದುಬಂದ ದಾರಿ, ಗವಿಮಠದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಹಾಗೂ ಮಲ್ಲಿಕಾರ್ಜುನ ಮಾಹಾಸ್ವಾಮಿಗಳ ಸಂಪೂರ್ಣ ವಿಡಿಯೋ ಮಾಹಿತಿ ಹಾಗೂ ದಿ. ಸಿ.ಬಿ. ಬಡ್ನಿ, ದಿ. ಆರ್.ಎನ್. ದೇಶಪಾಂಡೆ ಅವರು ನಡೆದುಬಂದ ಹಾದಿಯ ಕುರಿತು ವಿಡಿಯೋಗಳು ಮೂಡಿಬಂದವು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಧಾರವಾಡ ಮುರುಘಾಮಠ ಹಾಗೂ ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿದ್ದರು. ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎಂ.ಡಿ. ಬಟ್ಟೂರ ವಹಿಸಿದ್ದರು. ಉದ್ಘಾಟಕರಾಗಿ ಎಸ್.ಎಂ. ನೀಲಗುಂದ, ಮುಖ್ಯ ಅಥಿತಿಗಳಾಗಿ ಡಾ. ಎಸ್.ಸಿ. ಚವಡಿ, ಬಿ.ಸಿ. ಬಡ್ನಿ, ಎಫ್.ಎಸ್. ಅಮೋಘಿಮಠ, ಎಸ್.ಸಿ. ಕುರ್ತಕೋಟಿ, ವಿಜಯ ನೀಲಗುಂದ, ಕೆ.ಎಲ್. ಕರಿಗೌಡರ, ಪಿ.ಎ. ವಂಟಕರ, ಕಾಲೇಜಿನ ಪ್ರಾಚಾರ್ಯ ಎ.ಎಂ. ಅಂಗಡಿ, ಮುಖ್ಯೋಪಾಧ್ಯಾಯ ಇ.ಎಂ. ಗುಳೇದಗುಡ್ಡ, ಬಿ.ಜಿ. ಯಳವತ್ತಿ, ವಾಯ್.ಎಚ್. ಚಲವಾದಿ, ಎಚ್.ಎಂ. ಮಜ್ಜಿಗುಡ್ಡ, ಎಸ್.ಎಫ್. ಮುದ್ದಿನಗೌಡ್ರ ಸೇರಿದಂತೆ 2001/02ನೇ ಸಾಲಿನ ವಿದ್ಯಾರ್ಥಿಗಳು ಇದ್ದರು.

## ಮಲ್ಲಿಕಾರ್ಜುನ ಖಂಡಮ್ಮನವರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ರಾಷ್ಟ್ರಕವಿ ಕುವೆಂಪುರವರ ಜನ್ಮದಿನದ ನಿಮಿತ್ತ ಗದಗ ಜಿಲ್ಲಾಡಳಿತ ಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮದಲ್ಲಿ ಕಳಸಾಪೂರ ಗ್ರಾಮದ ಬಸವ ಕೇಂದ್ರದ ಕಾರ್ಯಾಧ್ಯಕ್ಷ, ಕನ್ನಡಾಭಿಮಾನಿ ಮಲ್ಲಿಕಾರ್ಜುನ ಖಂಡಮ್ಮನವರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ವ್ಹಿ.ಬಳ್ಳಾರಿ, ಹಿರಿಯ ಸಾಹಿತಿ ಚಂದ್ರಶೇಖರ ಎಸ್.ವಸ್ತ್ರದ ಉಪಸ್ಥಿತರಿದ್ದರು.

### ‘ಚಕ್ರವರ್ತಿ’ ದಿನಪತ್ರಿಕೆಯ 2026ರ ವರ್ಣರಂಜಿತ ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಡಿ.ಸಿ ಸಿ.ಎನ್. ಶ್ರೀಧರ್

# ಪತ್ರಿಕಾರಂಗ ಥರ್ಡ್ ಅಂಪೈರ್ ಇದ್ದಂತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರ ಮತ್ತು ಸಾರ್ವಜನಿಕರ ಮಧ್ಯೆ ಸೇತುವೆಯಾಗಿ ಕಾರ್ಯ ನಿರ್ವಹಿಸುತ್ತಿರುವ ನಾಲ್ಕನೇ ಅಂಗ ಎಂದೇ ಕರೆಯಲ್ಪಡುವ ಪತ್ರಿಕಾರಂಗವು ಥರ್ಡ್ ಅಂಪೈರ್ ಇದ್ದಂತೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಪ್ರಾಯಪಟ್ಟರು.

ಮಂಗಳವಾರ ಪತ್ರಿಕಾ ಭವನದಲ್ಲಿ ‘ಚಕ್ರವರ್ತಿ’ ಹೆಮ್ಮೆಯ ಕನ್ನಡ ದಿನ ಪತ್ರಿಕೆಯ 2026ರ ವರ್ಣರಂಜಿತ ಕ್ಯಾಲೆಂಡರ್ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರಕಾರದ ಯೋಜನೆಗಳು ಸಮರ್ಪಕವಾಗಿ ತಲುಪುತ್ತಿವೆಯೇ ಎಂಬ ಪ್ರಶ್ನೆಗೆ ಸ್ಪಷ್ಟ ಉತ್ತರ ಕೊಡುವ ಶಕ್ತಿ ಪತ್ರಿಕಾರಂಗಕ್ಕೆ ಇರುವುದರಿಂದ ಇದು ಥರ್ಡ್ ಅಂಪೈರಾಗಿ ಕಾಣುತ್ತಿದೆ ಎಂದರು.



ಸರಕಾರದ ಯೋಜನೆಗಳು ಸಮರ್ಪಕವಾಗಿ ಜಾರಿ ಆಗುತ್ತದೆಯೋ ಇಲ್ಲವೋ ಎಂಬುದು ಅನುಭವಿಸುವ ವ್ಯಕ್ತಿಗಳಿಗೆ ತಿಳಿಯಬೇಕು. ಇಲ್ಲವೇ ಸ್ವತಂತ್ರವಾದ ಥರ್ಡ್ ಪಾರ್ಟಿ ಇನಸ್ಪೆಕ್ಷನ್‌ನಂತಿರುವ ಪತ್ರಿಕಾರಂಗಕ್ಕೆ ತಿಳಿಯಬೇಕು. ಇದನ್ನು ಬಿಟ್ಟರೆ ಯಾರು ಕೂಡಾ ಸ್ಪಷ್ಟವಾಗಿ ತಿಳಿಯಲಾರರು. ನಿಖರವಾದ, ನೇರವಾದ ಸುದ್ದಿಗಳು ಬಂದರೆ ಅಂತಹ ಮಾಧ್ಯಮಗಳು ಜನರ ವಿಶ್ವಾಸ ಗಳಿಸಲು ಸಾಧ್ಯವಿದೆ. ಪತ್ರಿಕಾರಂಗ ಜವಾಬ್ದಾರಿಯನ್ನು ಅರಿತುಕೊಂಡಾಗ ಪತ್ರಿಕಾರಂಗದ ಆಶಯ ಈಡೇರಲು ಸಾಧ್ಯವೆಂದರು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ ಮಾತನಾಡಿ, ಮಾಧ್ಯಮರಂಗ ಕಲುಷಿತವಾಗಲು ಕಾರಣಗಳೇನು ಎಂಬುದನ್ನು ಅರಿತುಕೊಂಡು ಅವುಗಳಿಂದ ದೂರವಾದರೆ ಮಾಧ್ಯಮಗಳು ಎಲ್ಲರ ವಿಶ್ವಾಸ ಗಳಿಸಲು ಸಾಧ್ಯವಿದೆ ಎಂದರು.

ಗದಗ ವಾರ್ತಾಧಿಕಾರಿ ವಸಂತ ಮಡ್ಲೂರ ಮಾತನಾಡಿ, ಜಿಲ್ಲೆಯ ಮಾಧ್ಯಮಗಳ ಬೆಳವಣಿಗೆಯಲ್ಲಿ, ಸರಕಾರದ ಸೌಲಭ್ಯಗಳ ಸದುಪಯೋಗದಲ್ಲಿ ವಾರ್ತಾ ಇಲಾಖೆಯ ಪಾತ್ರ ಮಹತ್ವದ್ದಾಗಿದೆ ಎಂದರು.

ಸಮಾರಂಭದ ವೇದಿಕೆಯಲ್ಲಿದ್ದ ಹಿರಿಯ ಪತ್ರಕರ್ತ ಜಗದೀಶ್ ಕುಲಕರ್ಣಿ, ವಿಜಯಸಾಕ್ಷಿ ದಿನಪತ್ರಿಕೆ ಸಂಪಾದಕ ಎಚ್.ಎಂ. ಶರೀಫನವರ್, ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಸಂಪಾದಕರ ಸಂಘದ ಅಧ್ಯಕ್ಷ ಜಗದೀಶ ಪೂಜಾರ, ಎ.ಬಿ.ಎಸ್. ಎಸ್.ಕೆ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಈಶ್ವರಸಾ ಮೇರವಾಡೆ ಸಂದರ್ಭೋಚಿತವಾಗಿ ಮಾತನಾಡಿ ಚಕ್ರವರ್ತಿ ಪತ್ರಿಕೆಯ ಸಮಾಜಮುಖಿ ಸೇವೆಯನ್ನು ಶ್ಲಾಘಿಸಿದರು.

ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಮಾಧ್ಯಮಗಳ ಮಹತ್ವವನ್ನು ಎಲ್ಲರೂ ಅರ್ಥೈಸಿಕೊಳ್ಳುವ ಅಗತ್ಯವಿದೆ. ಪೊಲೀಸ್ ತನಿಖೆಯಲ್ಲಿ ಬಹಳಷ್ಟು ಸಹಕಾರಿಯಾಗಿ ನಿಲ್ಲುವ ಶಕ್ತಿ ಮಾಧ್ಯಮಗಳು. ಹೀಗಾಗಿ ಆಡಳಿತದ ಸುಧಾರಣೆಯಲ್ಲಿ, ಆಡಳಿತದ ವ್ಯವಸ್ಥೆಯಲ್ಲಿ ಬದಲಾವಣೆ ತರುವ ಶಕ್ತಿ ಮಾಧ್ಯಮಕ್ಕಿರುವದರಿಂದ ಆಡಳಿತದ ಜೊತೆ ಮಾಧ್ಯಮಗಳು ಆತ್ಮೀಯ ಸಂಬಂಧ ಹೊಂದಿವೆ ಎಂದರು.

ಸಮಾರಂಭದ ಸಾನಿಧ್ಯ ವಹಿಸಿದ್ದ ಸೊರಟೂರ ಶ್ರೀ ಷ.ಬ್ರ. ಫಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು ಆಶೀರ್ವಚನ ನೀಡಿ, ಪತ್ರಿಕಾರಂಗ ಮತ್ತು ಪತ್ರಕರ್ತರ ಬದುಕು ತಂತಿಯ ಮೇಲಿನ ನಡಿಗೆಯಾಗಿದೆ. ದಿನನಿತ್ಯ ಹಲವಾರು ಸವಾಲುಗಳನ್ನು ಎದುರಿಸುತ್ತಾರೆ ಎಂದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪತ್ರಿಕೆಯ ಸಂಪಾದಕ ಎನ್.ಆರ್. ಭಾಂಡಗೆ ಸರ್ವರ ಸಹಕಾರ ಸ್ಮರಿಸಿ ಅಭಿನಂದಿಸಿದರು. ವೇದಿಕೆ ಮೇಲೆ ಬೆಟಗೇರಿ ಎಸ್. ಎಸ್.ಕೆ ಪಂಚ ಟ್ರಸ್ಟ್ ಕಮಿಟಿ ಅಧ್ಯಕ್ಷ ಲೋಕನಾಥ್ ಕಬಾಡಿ, ಗದಗ ಎಸ್. ಎಸ್.ಕೆ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಭಾಂಡಗೆ ಉಪಸ್ಥಿತರಿದ್ದರು.

ಸುನೀಲ ಪ್ರಾರ್ಥಿಸಿದರು. ನ್ಯಾಯವಾದಿ, ಪತ್ರಿಕಾ ಕಾನೂನು ಸಲಹೆಗಾರ ಟಿ.ಎನ್. ಭಾಂಡಗೆ ಸ್ವಾಗತಿಸಿದರು. ರೈಜ್ ಆಫ್ ಗದಗ ಸಂಪಾದಕ ಆನಂದಯ್ಯ ವಿರಕ್ತಮಠ ನಿರೂಪಿಸಿದರು. ಆಸ್ಕ್ ನ್ಯೂಸ್ ಸಂಪಾದಕ ಡಾ. ಅನಂತ ಎಸ್. ಕಾರ್ಕಳ ಪ್ರಾಸ್ತಾವಿಕವಾಗಿ ಮಾತನಾಡಿ ವಂದಿಸಿದರು. ಸಮಾರಂಭದಲ್ಲಿ ಸಾಧಕರು, ಗಣ್ಯಮಾನ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

### ಇನಾಂ ವೀರಾಪೂರ ಪ್ರಕರಣ ಕುರಿತು ಸಭೆ ಜರುಗಿಸಿದ ಸಚಿವ ಆರ್.ಬಿ. ತಿಮ್ಮಾಪುರ

# ಎಫ್.ಐ.ಆರ್ ಪ್ರಕಾರ ಎಲ್ಲರ ಬಂಧನವಾಗಲಿ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಇನಾಂ ವೀರಾಪೂರ ಗ್ರಾಮದಲ್ಲಿ ಶಾಂತಿ, ಸೌಹಾರ್ದತೆ ನೆಲೆಸುವಂತೆ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಮತ್ತು ದೌರ್ಜನ್ಯಕ್ಕೆ ಒಳಗಾದ ಕುಟುಂಬಕ್ಕೆ ನಿಯಮಾನುಸಾರ ಪರಿಹಾರ, ರಕ್ಷಣೆ ನೀಡಬೇಕೆಂದು ಬಾಗಲಕೋಟ ಜಿಲ್ಲಾ ಉಸ್ತುವಾರಿ ಹಾಗೂ ಅಬಕಾರಿ ಇಲಾಖೆ ಸಚಿವರಾದ ಆರ್.ಬಿ. ತಿಮ್ಮಾಪುರ ಪೊಲೀಸ್ ಮತ್ತು ಜಿಲ್ಲಾಡಳಿತಕ್ಕೆ ಸೂಚಿಸಿದರು.

ಅವರು ಮಂಗಳವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತದೊಂದಿಗೆ ಸಭೆ ಜರುಗಿಸಿ, ಇನಾಂ ವೀರಾಪೂರ ಗ್ರಾಮದಲ್ಲಿನ ದೌರ್ಜನ್ಯ, ಕೊಲೆ ಪ್ರಕರಣದ ಮಾಹಿತಿ ಪಡೆದು ಮಾತನಾಡಿದರು.

> ಇದೊಂದು ಅಮಾನವೀಯ ಘಟನೆ. ಇಂತಹ ಮನಸ್ಥಿತಿಗಳಿಂದ ಸಾಮಾಜಿಕ ವ್ಯವಸ್ಥೆ ಹಾಳಾಗುತ್ತಿದೆ. ಈ ಘಟನೆಯಲ್ಲಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಬೇಕು. ಸರಕಾರಿ ಅಭಿಯೋಜಕರಿಗೆ ಅಗತ್ಯ ಸಹಕಾರ ನೀಡಬೇಕು. ಈಗಾಗಲೇ ದಾಖಲಿಸಿರುವ ಎಫ್.ಐ.ಆರ್ ಪ್ರಕಾರ ಎಲ್ಲರ ಬಂಧನವಾಗಬೇಕು. ಗ್ರಾಮದ ಸಾಮರಸ್ಯಕ್ಕೆ, ಸೌಹಾರ್ದತೆಗೆ ದಕ್ಕೆ ಆಗದಂತೆ ಅಧಿಕಾರಿಗಳು ಕ್ರಮವಹಿಸಬೇಕು.
>
> – ಆರ್.ಬಿ. ತಿಮ್ಮಾಪುರ.
> ಬಾಗಲಕೋಟ ಜಿಲ್ಲಾ ಉಸ್ತುವಾರಿ ಸಚಿವರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ವಿವೇಕಾನಂದ ದೊಡ್ಡಮನಿ ಕುಟುಂಬದ ಬೇಡಿಕೆಗಳನ್ನು ಜಿಲ್ಲಾಡಳಿತದ ಹಂತದಲ್ಲಿ ಈಡೇರಿಸಲಾಗಿದೆ. ಅವರ ಕೆಲವು ಬೇಡಿಕೆಗಳ ಕುರಿತು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ಈಗಾಗಲೇ ಗ್ರಾಮದಲ್ಲಿ ಶಾಂತಿ ಸಭೆ ಮಾಡಿ, ದೊಡ್ಡಮನಿ ಕುಟುಂಬವನ್ನು ಅವರ ಮನೆಗೆ ಸೇರಿಸಲಾಗಿದೆ. ಶಾಂತಿ, ಸೌಹಾರ್ದತೆಯಿಂದ ಎಲ್ಲರೂ ಇರುವುದಾಗಿ ಗ್ರಾಮಸ್ಥರು ಭರವಸೆ ನೀಡಿದ್ದಾರೆ. ಗ್ರಾಮದಲ್ಲಿ ಪೊಲೀಸ್ ಬಂದೋಬಸ್ತ್, ಕುಟುಂಬದವರಿಗೆ ಅಗತ್ಯ ಚಿಕಿತ್ಸೆ, ಕೌನ್ಸಲಿಂಗ್ ವ್ಯವಸ್ಥೆ ಮಾಡಲಾಗಿದೆ. ಈಗಾಗಲೇ 5 ಲಕ್ಷ ರೂ ಪರಿಹಾರ ನೀಡಲಾಗಿದೆ. ಗ್ರಾಮ ಹಾಗೂ ಕುಟುಂಬಗಳ ಮೇಲೆ ಮುನ್ನೆಚರಿಕೆಯಾಗಿ ನಿಗಾ ವಹಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಘಟನೆಯ ಕುರಿತು ಮತ್ತು ಆರೋಪಿತರ ಮೇಲೆ ಕೈಗೊಂಡ ಕ್ರಮಗಳ ಕುರಿತು ಸಚಿವರಿಗೆ ವಿವರಿಸಿದರು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಶುಭ ಪಿ ಸ್ವಾಗತಿಸಿ, ಘಟನೆ ಕುರಿತು ಇಲಾಖೆ ಕೈಗೊಂಡ ಕ್ರಮಗಳನ್ನು ವಿವರಿಸಿದರು.

ಸಭೆಯಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ತಹಸೀಲ್ದಾರ ಜೆ.ಬಿ. ಮಜ್ಜಗಿ, ಇನಸ್ಪೆಕ್ಟರ್ ಮುರಗೇಶ ಚನ್ನಣ್ಣವರ, ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿ ಹಿರೇಮಠ ಮಾತನಾಡಿದರು.

ಡಿಸಿಆರ್‌ಇ ವಿಜಯಪುರ ಡಿವೈಎಸ್‌ಪಿ ಹಾಗೂ ಇನಾಂ ವೀರಾಪುರ ಪ್ರಕರಣದ ತನಿಖಾಧಿಕಾರಿ ಸಂದೀಪಸಿಂಗ್ ಮುರಗೋಡ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಇನಸ್ಪೆಕ್ಟರ್ ವೀರಭದ್ರಪ್ಪ ಕಡಿ ಮುಂತಾದವರು ಸಭೆಯಲ್ಲಿ ಉಪಸ್ಥಿತರಿದ್ದರು.

## ತಲವಾರು ವಿತರಣೆ : ಹಿಂದೂ ರಕ್ಷಾ ದಳದ 10 ದುಷ್ಕರ್ಮಿಗಳ ಬಂಧನ

■ ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಗಾಝಿಯಾಬಾದ್‌ನ ಶಾಲಿಮಾರ್ ಗಾರ್ಡನ್ ಕಾಲೋನಿಯಲ್ಲಿ ತಲವಾರು ವಿತರಿಸಿದ ಆರೋಪದ ಮೇಲೆ ಹಿಂದೂ ರಕ್ಷಾ ದಳದ ಹತ್ತು ದುಷ್ಕರ್ಮಿಗಳನ್ನು ಪೊಲೀಸರು ಸೋಮವಾರ (ಡಿ.29) ಬಂಧಿಸಿದ್ದಾರೆ ಎಂದು ವರದಿಯಾಗಿದೆ.

ಶಾಲಿಮಾರ್ ಗಾರ್ಡನ್ ಸಹಾಯಕ ಪೊಲೀಸ್ ಆಯುಕ್ತ ಅತುಲ್ ಕುಮಾರ್ ಸಿಂಗ್ ಮಾತನಾಡಿ, ಗುರುತಿಸಲಾದ 16 ಮಂದಿ ಮತ್ತು 25–30 ಅಪರಿಚಿತ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದಿದ್ದಾರೆ.

ಹಿಂದೂ ರಕ್ಷಾ ದಳದ ರಾಷ್ಟ್ರೀಯ ಅಧ್ಯಕ್ಷ ಭೂಪೇಂದ್ರ ಚೌಧರಿ ಅಲಿಯಾಸ್ ಪಿಂಕಿ ಕೂಡ ಎಫ್‌ಐಆರ್‌ನಲ್ಲಿ ಹೆಸರಿಸಲಾದವರಲ್ಲಿ ಸೇರಿದ್ದಾರೆ ಎಂದು ಸಿಂಗ್ ಹೇಳಿರುವುದಾಗಿ ಹಿಂದೂಸ್ತಾನ್ ಟೈಮ್ಸ್ ವರದಿ ಮಾಡಿದೆ.

ಹಿಂದುತ್ವ ಗುಂಪಿನ ಸದಸ್ಯರು ತಲವಾರು ಪ್ರದರ್ಶಿಸಿದ ಮತ್ತು ಹಂಚಿದ ವಿಡಿಯೋಗಳು ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆದ ನಂತರ ಆರೋಪಿಗಳನ್ನು ಬಂಧಿಸಲಾಗಿದೆ.

“ಬಾಂಗ್ಲಾದೇಶದಲ್ಲಿ ನಮ್ಮ ಹಿಂದೂ ಸಹೋದರರನ್ನು ಕೊಲ್ಲಲಾಗಿರುವ ರೀತಿ ಹಿಂದೂಗಳು ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಕತ್ತಿಗಳನ್ನು ಇಟ್ಟುಕೊಳ್ಳಬೇಕು. ಪ್ರತಿಯೊಬ್ಬ ಜಿಹಾದಿಗೂ ಹಿಂದೂ ರಕ್ಷಾ ದಳವು ಅವರದೇ ಭಾಷೆಯಲ್ಲಿ ಪ್ರತಿಕ್ರಿಯಿಸುತ್ತದೆ” ಎಂದು ಚೌಧರಿ ಒಂದು ವಿಡಿಯೋದಲ್ಲಿ ಹೇಳುತ್ತಿರುವುದು ಇದೆ.

ಡಿಸೆಂಬರ್ 18ರಂದು ಬಾಂಗ್ಲಾದೇಶದ ಮೈಮೆನ್ಸಿಂಗ್ ಜಿಲ್ಲೆಯಲ್ಲಿ ದೇವದೂಷಣೆಯ ಆರೋಪದ ಮೇಲೆ ಗುಂಪೊಂದು ಥಳಿಸಿ ಕೊಂದ ಕಾರ್ಖಾನೆಯ ಕಾರ್ಮಿಕ ದೀಪು ಚಂದ್ರ ದಾಸ್ ಅವರ ಹತ್ಯೆಯನ್ನು ಚೌಧರಿ ಉಲ್ಲೇಖಿಸಿದ್ದಾರೆ.

ಎಫ್‌ಐಆರ್ ಪ್ರಕಾರ, ಹಿಂದೂ ರಕ್ಷಾ ದಳದ ಸದಸ್ಯರು ಆಯುಧಗಳೊಂದಿಗೆ ಪ್ರದೇಶದಲ್ಲಿ ರ‍್ಯಾಲಿ ನಡೆಸುವಾಗ ಕೋಮುವಾದಿ ಘೋಷಣೆಗಳನ್ನು ಕೂಗಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ.

ಕರ್ನಾಟಕ ಸರ್ಕಾರ
**ಜಿಲ್ಲಾ ಪಂಚಾಯತ ಗದಗ**
**ತಾಲೂಕ ಪಂಚಾಯತ ರೋಣ**

**ಗ್ರಾಮ ಪಂಚಾಯತ ಕಾರ್ಯಾಲಯ, ಡ.ಸ.ಹಡಗಲಿ**

ಕ್ರ.ಸಂ:ಗ್ರಾ.ಪಂ./ಡ ಸ ಹಡಗಲಿ/ನರೇಗಾ/ದ.ಪ.ಪ್ರ/2025–26 ದಿನಾಂಕ:30–12–2025

**ದರಪಟ್ಟಿ ಪ್ರಕಟಣೆ**

2025–2026ನೇ ಸಾಲಿನ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗಳಿಗೆ ವಿವಿದ ರೀತಿಯ ಸಾಮಗ್ರಿಗಳನ್ನು ಸಂಗ್ರಹಿಸುವ ಸಂಬಂಧ ದರಪಟ್ಟಿ ಆಹ್ವಾನಿಸಲಾಗಿದೆ. ಇದರ ಪ್ರಯುಕ್ತ ಜಿಲ್ಲಾ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ದರ ಪಟ್ಟಿಯನ್ನು ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತಿದೆ.

| ಕ್ರ.ಸಂ. | ಕಾಮಗಾರಿಯಹೆಸರು | ಕಾಮಗಾರಿಯ ಅಂದಾಜು ಮೊತ್ತ | ಕಾಮಗಾರಿಗಳಿಗೆ ಪೂರೈಸ ಬೇಕಾದ ಸಾಮಗ್ರಿ ಮೊತ್ತ |
|---|---|---|---|
| 01 | 514004005–25–235298 ಡ .ಸ.ಹಡಗಲಿ ಗ್ರಾಮದ ನಿಂಗಪ್ಪ ಫ ಹೊಸಮನಿ ಇವರ ಮನೆಯಿಂದ ಮುಖ್ಯ ರಸ್ತೆಯವರೆಗೆ ಸಿ.ಸಿ. ಗಟಾರ ನಿರ್ಮಾಣ | 3730000 | 231945.46 |
| 02 | 1514004005/25/214 ಡ ಸ ಹಡಗಲಿ ರೇಣವ್ವ ಶಿ ಮಾದರ ಮನೆಯಿಂದ ಅಂಬೇಡ್ಕರ್ ಭವನದ ಮುಂದೆ ಹಾಯ್ದು ಮುಖ್ಯ ರಸ್ತೆಯವರೆಗೆ ಸಿ.ಸಿ. ರಸ್ತೆ ನಿರ್ಮಾಣ | 3730000 | 236630.38 |
| 03 | 1514004005–25–267656 ಗುಜಮಾಗಡಿ ಗ್ರಾಮದ ಕುಡಿಯುವ ನೀರಿನ ಕೆರೆಯಿಂದ ಫಕೀರಯ್ಯ ಬಸಯ್ಯ ಉಮಚಗಿ ಇವರ ಮನೆಯ ವರೆಗೆ ಗಟಾರ ನಿರ್ಮಾಣ | 149000 | 95396.01 |
| 04 | 1514004005–25–238039 ಗುಜಮಾಗಡಿ ಗ್ರಾಮದ ಕಲ್ಲಪ್ಪ ಭರಮಪ್ಪ ಮಡಿವಾಳರ ಇವರ ಮನೆಯಿಂದ ಶ್ರೀ ಲಕ್ಷ್ಮೀ ಗುಡಿಯವರೆಗೆ ಸಿ.ಸಿ. ರಸ್ತೆ ನಿರ್ಮಾಣ | 149000 | 78222.83 |
| 05 | 1514004005–25–219 ಗುಜಮಾಗಡಿ ಗ್ರಾಮದ ಸಂಗಯ್ಯ ಕಾಡಶಿಡ್ಡೆಶ್ವರಮಠ ಇವರ ಮನೆಯಿಂದ ಮೇನ್ ಗದಗ ರಸ್ತೆಯ ವರೆಗೆ ಗಟಾರ ನಿರ್ಮಾಣ | 149000 | 95396.01 |
| 06 | 1514004005–25–213.ಡ ಸ ಹಡಗಲಿ ಗ್ರಾಮದ ಕುಡಿಯುವ ನೀರಿನ ಕೆರೆ ಕೊಡಿ ನಿರ್ಮಾಣ | 800000 | 495800 |

1) ದರಪಟ್ಟಿ ಅವಧಿ 31–12–2025 ರಿಂದ 07–01–2026 ರವರೆಗೆ
2) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ 07–01–2026 ಮಧ್ಯಾಹ್ನ 12.30 ಘಂಟೆಯ ವರೆಗೆ.
3) ದರಪಟ್ಟಿ ತೆರೆಯುವ ದಿನಾಂಕ 07–01–2026 ಮಧ್ಯಾಹ್ನ 12.30 ಘಂಟೆ ನಂತರ.
4) ಅರ್ಜಿ ಸಲ್ಲಿಸುವ ಆಸಕ್ತ ನೋಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು.
5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್‌ನಲ್ಲಿ ನೋಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು.
6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳು ಮಾಹಿತಿಗಾಗಿ ಪಂಚಾಯತಿ ಅಭಿವೃದ್ದಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಾಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯ ಬಹುದಾಗಿದೆ.

ಸಹಿ ಆಗಿದೆ/–
**ಅಭಿವೃದ್ದಿ ಅಧಿಕಾರಿಗಳು**
ಗ್ರಾಮ ಪಂಚಾಯತ ಡ ಸ ಹಡಗಲಿ

ಸಹಿ ಆಗಿದೆ/–
**ಅಧ್ಯಕ್ಷರು**
ಗ್ರಾಮ ಪಂಚಾಯತ ಡ ಸ ಹಡಗಲಿ

## ಅಧಿಕಾರಕ್ಕೆ ಬಂದರೆ ಬಂಗಾಳವನ್ನು ನುಸುಳುಕೋರರಿಂದ ಮುಕ್ತಗೊಳಿಸುತ್ತೇವೆ: ಅಮಿತ್ ಶಾ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮುಂದಿನ ವರ್ಷ ನಡೆಯಲಿರುವ ವಿಧಾನಸಭಾ ಚುನಾವಣೆಯ ನಂತರ ಪಕ್ಷವು ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ, ಪಶ್ಚಿಮ ಬಂಗಾಳವನ್ನು ನುಸುಳುಕೋರರಿಂದ ಮುಕ್ತಗೊಳಿಸುವುದು ಬಿಜೆಪಿಯ ಮೊದಲ ಕೆಲಸ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮಂಗಳವಾರ ಹೇಳಿದ್ದಾರೆ.

ಮೂರು ದಿನಗಳ ಭೇಟಿಗಾಗಿ ಸೋಮವಾರ ಕೋಲ್ಕತ್ತಾಗೆ ಆಗಮಿಸಿದ್ದ ಅವರು ಈ ವಿಷಯ ತಿಳಿಸಿದರು. “ನಾವು 2026 ರಲ್ಲಿ ಪಶ್ಚಿಮ ಬಂಗಾಳದಲ್ಲಿ ಅಧಿಕಾರಕ್ಕೆ ಬಂದರೆ, ನಮ್ಮ ಮೊದಲ ಕೆಲಸ ಅಕ್ರಮ ನುಸುಳುವಿಕೆಯನ್ನು ತಡೆಯುವುದು ಮಾತ್ರವಲ್ಲದೆ ಪ್ರಸ್ತುತ ರಾಜ್ಯದೊಳಗೆ ಉಳಿದುಕೊಂಡಿರುವ ಅಕ್ರಮ ನುಸುಳುಕೋರರನ್ನು ಓಡಿಸುವುದು” ಎಂದು ಕೇಂದ್ರ ಗೃಹ ಸಚಿವರು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಆರಂಭಿಕ ಹೇಳಿಕೆಯಲ್ಲಿ ಹೇಳಿದರು.

ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಒಳನುಸುಳುವಿಕೆಯ ವಿರುದ್ಧ ಕ್ರಮ ಕೈಗೊಳ್ಳುವುದನ್ನು ತ ಡೆ ಂ ುುು ವ ು ದ ಲ್ಲ ದೆ , ನುಸುಳುಕೋರರನ್ನು ಪೋಷಿಸಿದ್ದಾರೆ ಎಂದು ಅವರು ಆರೋಪಿಸಿದರು.

“ಬಾಂಗ್ಲಾದೇಶದೊಂದಿಗಿನ ಅಂತರರಾಷ್ಟ್ರೀಯ ಗಡಿಗಳಲ್ಲಿ ಮುಳ್ಳು ಬೇಲಿ ನಿರ್ಮಿಸುವುದನ್ನು ವಿರೋಧಿಸುವ ಯಾವುದೇ ರಾಜ್ಯ ಸರ್ಕಾರ ದೇಶದಲ್ಲಿದೆಯೇ ಎಂದು ನಾನು ಮಮತಾ ಬ್ಯಾನರ್ಜಿಯವರನ್ನು ಕೇಳಲು ಬಯಸುತ್ತೇನೆ. ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ಅಕ್ರಮ ಒಳನುಸುಳುವಿಕೆ ಸಮಸ್ಯೆ ಪ್ರಸ್ತುತ ರಾಜ್ಯದ ಸಮಸ್ಯೆಯಲ್ಲ; ಬದಲಾಗಿ, ಅದು ರಾಷ್ಟ್ರೀಯ ಸಮಸ್ಯೆಯಾಗಿದೆ” ಎಂದು ಶಾ ಹೇಳಿದರು.

ತಮ್ಮ ಆರಂಭಿಕ ಹೇಳಿಕೆಗಳಲ್ಲಿ, ಭ್ರಷ್ಟಾಚಾರದ ವಿಷಯಗಳ ಕುರಿತು ಅವರು ಪಶ್ಚಿಮ ಬಂಗಾಳ ಸರ್ಕಾರ ಮತ್ತು ಆಡಳಿತಾರೂಢ ತೃಣಮೂಲ ಕಾಂಗ್ರೆಸ್ ವಿರುದ್ಧ ಕಟುವಾದ ದಾಳಿ ನಡೆಸಿದರು. “ಚಿಟ್ ಫಂಡ್ ಹಗರಣಗಳಿಂದ ಶಾಲಾ–ಉದ್ಯೋಗ ಹಗರಣಗಳವರೆಗೆ, ಕಲ್ಲಿದ್ದಲಿನಿಂದ ಜಾನುವಾರು ಕಳ್ಳಸಾಗಣೆವರೆಗೆ, ತೃಣಮೂಲ ಕಾಂಗ್ರೆಸ್ ನಾಯಕರು ಮತ್ತು ಮಂತ್ರಿಗಳ ಹೆಸರುಗಳು ಎಲ್ಲೆಡೆ ಇವೆ. ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವುದರಿಂದ ರಾಜ್ಯದಲ್ಲಿ ಅನೇಕ ಮಂತ್ರಿಗಳನ್ನು ಜೈಲಿಗೆ ಹಾಕಲಾಗಿದೆ” ಎಂದು ಅವರು ಹೇಳಿದರು.

ಕರ್ನಾಟಕ ಸರ್ಕಾರ
**ತಾಲೂಕ ಪಂಚಾಯತ ಕಾರ್ಯಾಲಯ ನರಗುಂದ**
ಕಚೇರಿ ದೂರವಾಣಿ:– 08377–244744, ಇ–ಮೇಲ್ ವಿಳಾಸ:– tpnargund03@gmail.com

ಕ್ರ.ಸಂ:ತಾಪಂನ/ಟೆಂಡರ/2025–26 ದಿನಾಂಕ:– 30–12–2025

**ಕೆಪಿಪಿ ಪೋರ್ಟಲ್ ಮೂಲಕ ಟೆಂಡರ್ ಪ್ರಕಟಣೆ Standard Bid Document KW-1 (ದ್ವಿ–ಲಕೋಟೆ ಪದ್ದತಿ)**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ನರಗುಂದ ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ **1999–2000** ಪ್ರಕಾರ ಪಾರದರ್ಶಕತೆ ಆ್ಯಕ್ಟ್ **2000** ನಿಯಮದಂತೆ **Standard Bid Document KW-1** ರ ನಿಯಮಗಳನ್ವಯ ಅರ್ಹ ಗುತ್ತಿಗೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ ಈ ಕೆಳಗೆ ನಮೂದಿಸಿದ ಮಂಜೂರಾದ ಕಾಮಗಾರಿಗಳಿಗೆ, ಲೆಕ್ಕ ಶೀರ್ಷಿಕೆ: **2515–00–102–0–62 (059) 2025–26** ನೇ ಸಾಲಿನ ತಾಲೂಕ ಪಂಚಾಯತ ಅನಿರ್ಬಂದಿತ ಅನುದಾನ ಯೋಜನೆ ಅಡಿ ಟೆಂಡರ್‌ನ್ನು ಈಗಾಗಲೇ ಆಹ್ವಾನಿಸಲಾಗಿದ್ದು, ಆದರೆ ತಾಂತ್ರಿಕ ಕಾರಣಗಳಿಂದ ಈ ಮೊದಲು ಆಹ್ವಾನಿಸಿದ ಟೆಂಡರ್‌ನ್ನು ರದ್ದುಗೊಳಿಸಲಾಗಿದ್ದು, ಮತ್ತೊಮ್ಮೆ ಹೊಸದಾಗಿ ಟೆಂಡರ್ ಆಹ್ವಾನಿಸಲಾಗಿದೆ ಹಾಗಾಗಿ ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ https://kppp.karnataka.gov.in ಮುಖಾಂತರ ಭಾಗವಹಿಸಬಹುದು.

**Indent-Nos: RDPR/2025-26/WORK_INDENT:21351/CALL-2, 21362/CALL-2, 21383/CALL-2, 21385 (CAT-II (A)/CALL-2, 21480/CALL2, 21487/CALL-2, 21491/CALL-2, 21494(CAT-II (A)/CALL-2, 21503/CALL-2, 21518 (SC)/CALL-2, 21507 (ST 4.00 Lakhs)/ CALL-2, 21565/CALL-2, 21569 (SC)/CALL-2, 21845 (23.00 Lakhs)/CALL-2, & 21879(SC)/CALL-2**

**ಟೆಂಡರಿಗಿಟ್ಟ ಮೊತ್ತ ರೂ. 149.86 ಲಕ್ಷ**

**ಸಾಮಾನ್ಯ ಸೂಚನೆಗಳು:** 1) ಇ–ಪೋರ್ಟಲ್ ಮೂಲಕ ಮಾಹಿತಿ ಮತ್ತು ಸ್ಪಷ್ಟೀಕರಣ ಕೇಳಲು ಕೊನೆಯ **ದಿನಾಂಕ: 31–12–2025 ಸಾಯಂಕಾಲ 4.00 ಗಂಟೆಯವರೆಗೆ** 2) ಇ–ಪೋರ್ಟಲ್ ಮೂಲಕ ಟೆಂಡರ್ ಸಲ್ಲಿಸಲು ಕೊನೆಯ **ದಿನಾಂಕ: 06–01–2026 ಸಾಯಂಕಾಲ 4.00 ಗಂಟೆಯವರೆಗೆ** 3) ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 08–01–2026 ಮಧ್ಯಾಹ್ನ 12.00 ಗಂಟೆಗೆ** 4) ಆರ್ಥಿಕ ಬಿಡ್ ತೆರೆಯುವ **ದಿನಾಂಕ: 09–01–2026 ಸಾಯಂಕಾಲ 4.00 ಗಂಟೆಗೆ** ಹಾಗೂ ಯಾವುದೇ ಬಿಡ್ ನಿಗದಿತ ದಿನಾಂಕದ ಒಳಗಡೆ ಸಲ್ಲಿಕೆಯಾಗದಿದ್ದಲ್ಲಿ 3 ದಿನಗಳ ಸ್ವಯಂ ಚಾಲಿತವಾಗಿ ದಿನಾಂಕ ವಿಸ್ತರಣೆಯಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ನರಗುಂದ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು. **ದೂರವಾಣಿ ಸಂಖ್ಯೆ 9480865120** ಟೆಂಡರ್ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ: ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಸಹಿ/–
**ಕಾರ್ಯನಿರ್ವಾಹಕ ಅಧಿಕಾರಿಗಳು**
**ತಾಲೂಕ ಪಂಚಾಯತ, ನರಗುಂದ**

ವಾ.ಸಾ.ಇ./ಗದಗ/489/ದೇಶಪಾಂಡೆಪಬ್ಲಿಸಿಟಿ/2025–26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka